ಸಂಪುಟ : 11 ಸಂಚಿಕೆ: 10 ಪುಟ : 4+2 ಬೆಲೆ: 3.00 ಗುರುವಾರ ಫೆಬ್ರವರಿ 05 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 10 Pages : 4+2 Price : 3.00 Thursday February 05 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಗೃಹಲಕ್ಷ್ಮೀ ಯೋಜನೆಯ ಸಮರ್ಪಕ ಅನುಷ್ಠಾನಕ್ಕೆ ಪ್ರಾಧಿಕಾರದ ಅಧ್ಯಕ್ಷ ಎಸ್.ಆರ್. ಪಾಟೀಲ ಸೂಚನೆ

# 'ಗೃಹಲಕ್ಷ್ಮೀ' ಮಹಿಳಾ ಸಬಲೀಕರಣದ ಹೆಗ್ಗುರುತು

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ರಾಜ್ಯ ಸರಕಾರದ ಮಹತ್ವಾಕಾಂಕ್ಷಿ ಗೃಹಲಕ್ಷ್ಮೀ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು. ಜಿಲ್ಲೆಯಲ್ಲಿ 3,96,119 ಗೃಹಲಕ್ಷ್ಮೀ ಫಲಾನುಭವಿಗಳಿದ್ದು, ಮೃತ ಮತ್ತು ಸ್ಥಳಾಂತರವಾದ ಫಲಾನುಭವಿಗಳ ಕುರಿತು ಪ್ರತಿ ತಿಂಗಳು ನಿರಂತರ ಪರಿಷ್ಕರಣೆ ಮಾಡಬೇಕು. ಅರ್ಹರಿಗೆ ಗೃಹಲಕ್ಷ್ಮೀ ಯೋಜನೆ ತಲುಪಿಸುವಲ್ಲಿ ಅಧಿಕಾರಿಗಳು ಶ್ರಮಿಸಬೇಕೆಂದು ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಶ್ಯಾನಪ್ಪಗೌಡ ಆರ್.ಪಾಟೀಲ ಸೂಚಿಸಿದರು.

ಅವರು ಬುಧವಾರ ಬೆಳಿಗ್ಗೆ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಯ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಗೃಹಲಕ್ಷ್ಮೀ ಯೋಜನೆಯು ಮಹಿಳಾ ಸಬಲೀಕರಣ ಹಾಗೂ ಸ್ವಾಭಿಮಾನದ ಹೆಗ್ಗುರುತಾಗಿದೆ. ಕರ್ನಾಟಕ ರಾಜ್ಯ ಸರಕಾರವು ಬಿಪಿಎಲ್ ಮತ್ತು ಎಪಿಎಲ್ ಅಂತ್ಯೋದಯ ಕಾರ್ಡ್‌ನಲ್ಲಿ ನಮೂದಿಸಿರುವಂತೆ ಕುಟುಂಬದ ಯಜಮಾನಿ ಮಹಿಳೆಗೆ ಪ್ರತಿ ತಿಂಗಳು 2 ಸಾವಿರ ರೂ.ಗಳ ಸಹಾಯಧನ ನೀಡಲಾಗುತ್ತಿದೆ ಎಂದು ಹೇಳಿದರು.

ಯುವನಿಧಿ ಯೋಜನೆಯಲ್ಲಿ ಜಿಲ್ಲೆಯ ಪದವೀಧರ ನೋಂದಾಯಿತರಾಗಿದ್ದು, ಅವರಿಗೆ ಉದ್ಯೋಗ ಹೊಂದಲು ಸರಿಯಾದ ಕೌಶಲ್ಯ ತರಬೇತಿ, ಮಾರ್ಗದರ್ಶನ ನೀಡಬೇಕು. ಈಗ ಪದವಿ ಹಾಗೂ ಇತರ ಪರೀಕ್ಷೆಗಳು ಜರುಗಿದ್ದು, ಹೊಸ ಫಲಾನುಭವಿಗಳು ಯುವನಿಧಿ ಯೋಜನೆಗೆ ಒಳಪಡಲು ಆಸಕ್ತರಿದ್ದಾರೆ. ಅಧಿಕಾರಿಗಳು ತಾಲೂಕು ಮಟ್ಟದಲ್ಲಿ ಯುವನಿಧಿ ಯೋಜನೆಯ ಕ್ಯಾಂಪೆನ್ ಮಾಡಿ, ಮಾಹಿತಿ ನೀಡಬೇಕು ಎಂದು ಹೇಳಿದರು.



ಅನ್ನಭಾಗ್ಯ ಯೋಜನೆಯಡಿ ಅರ್ಹರಿಗೆ ಕಿಟ್ ವಿತರಿಸಬೇಕು ಮತ್ತು ನಿಯಮಾನುಸಾರ ಪಡಿತರ ವಿತರಿಸಬೇಕು. ಕೆಲವು ಪಡಿತರದಾರರಿಗೆ ಸಮಯಕ್ಕೆ ಸರಿಯಾಗಿ ಪಡಿತರ ಸಿಗುತ್ತಿಲ್ಲವೆಂದು ದೂರು ಬರುತ್ತಿದ್ದು, ಸಂಬಂದಪಟ್ಟ ಸ್ಥಳೀಯ ಅಧಿಕಾರಿಗಳು, ಸ್ಥಳಕ್ಕೆ ಭೇಟಿ ನೀಡಿ, ಪರಿಶೀಲಿಸಿ, ಸೂಕ್ತ ಪರಿಹಾರ ಸೂಚಿಸಬೇಕೆಂದು ಅಧ್ಯಕ್ಷ ಶ್ಯಾನಪ್ಪಗೌಡ ಪಾಟೀಲ ತಿಳಿಸಿದರು.

ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಮಾತನಾಡಿ, ಗ್ಯಾರಂಟಿ ಯೋಜನೆಗಳ ಜಾರಿಯಲ್ಲಿ ವಿಳಂಬ ಮತ್ತು ಅನರ್ಹರಿಗೆ ತಲುಪಿಸಿದಲ್ಲಿ ಅಂತಹ ಅಧಿಕಾರಿಗಳ ಮೇಲೆ ಕ್ರಮ ತೆಗೆದುಕೊಳ್ಳಲಾಗುತ್ತದೆ. ಪ್ರತಿ ಯೋಜನೆಯಡಿ ರೂಪಿಸಿರುವ ನಿಯಮಗಳನ್ನು ಪಾಲಿಸಿ, ಅರ್ಹ ಫಲಾನುಭವಿಗಳನ್ನು ಆಯ್ಕೆ ಮಾಡಬೇಕು. ಫಲಾನುಭವಿಗಳು ಸಲ್ಲಿಸುವ ದಾಖಲಾತಿಗಳನ್ನು ಸಂಪೂರ್ಣವಾಗಿ ಪರಿಶೀಲಿಸಿ, ಮುಂದಿನ ಕ್ರಮವಹಿಸಬೇಕು ಎಂದು ಸೂಚಿಸಿದರು. ವೇದಿಕೆಯಲ್ಲಿ ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಸಮಿತಿ ಉಪಾಧ್ಯಕ್ಷರಾದ ಮುರಗಯ್ಯಾ ವಿರಕ್ತಮಠ, ಶಾಂತಪ್ಪ ಅಕ್ಕಿ, ರತ್ನಾ ತೇಗೂರಮಠ ಮತ್ತು ಉಪಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ ಇದ್ದರು.

ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ವಿವಿಧ ತಾಲೂಕು ಸಮಿತಿಗಳ ಅಧ್ಯಕ್ಷರಾದ ಅರವಿಂದ ಏಗನಗೌಡರ, ಬಸಪ್ಪ ಬಾವಕಾರ, ವರ್ಧಮಾನಗೌಡ ಹಿರೇಗೌಡರ, ಶಿವಾನಂದ ಭೂಮಣ್ಣವರ, ಸಾವಿತ್ರಿ ಬಸವರಾಜ ಭಗವತಿ ಮತ್ತು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಿದ್ದರು.

ಪ್ರಗತಿ ಪರಿಶೀಲನಾ ಸಭೆಯ ನಂತರ ಗ್ಯಾರಂಟಿ ಯೋಜನೆಗಳ ಜಿಲ್ಲಾ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಶ್ಯಾನಪ್ಪಗೌಡ ಆರ್.ಪಾಟೀಲ ಅವರು ಜ. 5ರಂದು ಜರುಗಿದ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳ ಸಮಾವೇಶ ಹಾಗೂ ಕಾರ್ಯಾಗಾರ ಯಶಸ್ವಿಗೊಳಿಸಿದ ಹಿನ್ನೆಲೆಯಲ್ಲಿ ಪ್ರಭಾರ ಜಿಲ್ಲಾಧಿಕಾರಿ ಭುವನೇಶ ಪಾಟೀಲ ಸೇರಿದಂತೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಇಲಾಖೆಗಳ ಜಿಲ್ಲಾ ಮುಖ್ಯಸ್ಥರನ್ನು ಮತ್ತು ವಿವಿಧ ಸಮಿತಿಗಳ ಮುಖ್ಯಸ್ಥರನ್ನು ಸನ್ಮಾನಿಸಿ, ಗೌರವಿಸಿದರು.

---

### ಶ್ರೀಹಾನಗಲ್ಲ ಕುಮಾರ ಮಹಾಶಿವಯೋಗಿಗಳವರ 96ನೇ ಪುಣ್ಯಸ್ಮರಣೋತ್ಸವ, ಜಾತ್ರಾ ಮಹೋತ್ಸವದ ಷಟಸ್ಥಲ ಧ್ವಜಾರೋಹಣ

# ಶಿವ ಸಾಯುಜ್ಯವೇ ಶಿವಯೋಗದ ಮೂಲ ತತ್ವ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಶಿವ ತಪ, ಶಿವ ಕರ್ಮ, ಶಿವಜಪ, ಶಿವ ಧ್ಯಾನ, ಶಿವಜ್ಞಾನ ಎಂಬ ಪಂಚಸೂತ್ರಗಳೊಂದಿಗೆ ಶಿವ ಸಾಯುಜ್ಯವನ್ನು ಪಡೆಯುವುದೇ ಶಿವಯೋಗ ಸಿದ್ಧಾಂತದ ಮೂಲ ತತ್ವ. ಇಂತಹ ಸಿದ್ಧಾಂತಕ್ಕೆ ಪರಿಪೂರ್ಣತೆಯನ್ನು ತಮ್ಮ ಜೀವಿತದ ಮೂಲಕ ನೀಡಿದವರು ಹಾನಗಲ್ಲ ಶ್ರೀ ಕುಮಾರ ಶಿವಯೋಗಿಗಳು ಎಂದು ನಿಡಗುಂದಿಕೊಪ್ಪ ಶಾಖಾ ಶಿವಯೋಗ ಮಂದಿರದ ಅಭಿನವ ಚನ್ನಬಸವ ಸ್ವಾಮೀಜಿ ಹೇಳಿದರು.

ಸಮೀಪದ ನಿಡಗುಂದಿಕೊಪ್ಪ ಶಾಖಾ ಶಿವಯೋಗ ಮಂದಿರದಲ್ಲಿ ಕಾರಣಿಕ ಯುಗಪುರುಷ ಶ್ರೀಹಾನಗಲ್ಲ ಕುಮಾರ ಮಹಾಶಿವಯೋಗಿಗಳವರ 96ನೇ ಪುಣ್ಯಸ್ಮರಣೋತ್ಸವ, ಜಾತ್ರಾ ಮಹೋತ್ಸವದ ನಿಮಿತ್ತ ಷಟಸ್ಥಲ ಧ್ವಜಾರೋಹಣದಲ್ಲಿ ಅವರು ಆಶೀರ್ವಚನ ನೀಡಿದರು.

ಆಧ್ಯಾತ್ಮಿಕತೆಯ ಆವರಣವನ್ನು ಕೇವಲ ಶಾಸ್ತ್ರಾಭ್ಯಾಸದಿಂದ ಅಳೆಯುವುದಕ್ಕೆ ಸಾಧ್ಯವಿಲ್ಲ. ಬದಲಾಗಿ ಶಾಸ್ತ್ರಗಳ ಮೂಲಕ ಸಶಕ್ತ ಸಮಾಜದ ನಿರ್ಮಾಣಕ್ಕಾಗಿ ತಮ್ಮ ಸರ್ವವನ್ನೂ ಸಾಕಾರಗೊಳಿಸುವುದು ಎಂದರೆ ಸಂತರು ಯೋಗಿಗಳು. ಅಂತಹದೇ ಒಬ್ಬ ಶ್ರೇಷ್ಠ ಶಿವಭಕ್ತನಾಗಿದ್ದುಕೊಂಡು ಸ್ವಚ್ಛ ಸೇವಾ ಮನೋಭಾವದ ಸಮಾಜವನ್ನು ನಿರ್ಮಿಸಿದವರು ಶ್ರೀ ಕುಮಾರ ಶಿವಯೋಗಿಗಳು. ಸರಳ ಸಂಪನ್ನರಾಗಿ ಮತ್ತು ವಿನಯ ಸಂಪನ್ನರಾಗಿ ದಾರ್ಶನಿಕ ಭಾವದೊಂದಿಗೆ ಜೀವಿತ್ವದ ಮತ್ತು ದೈವತ್ವದ ಸಾರ್ಥಕತೆಯನ್ನು ಕಾರ್ಯಗಳ ಮೂಲಕ ತಿಳಿಯಪಡಿಸಿದವರು ಕುಮಾರ ಶಿವಯೋಗಿಗಳು ಎಂದರು.

ಧರ್ಮರ ಮಠದ ನಾಗಲಿಂಗಪ್ಪಜ್ಜ ಧ್ವಜಾರೋಹಣ ನೆರವೇರಿಸಿದರು. ಜಾತ್ರಾ ಮಹೋತ್ಸವ ಸಮಿತಿ ಅಧ್ಯಕ್ಷ ಬಸವರಾಜ ಸೂಡಿ, ಮಲ್ಲೇಶಪ್ಪ ಸಜ್ಜನರ, ಎಂ.ಎಂ. ಸರ್ವಿ, ಕರವೀರಪ್ಪ ಸರ್ವಿ, ಶರಣಪ್ಪ ಬೆಲ್ಲದ, ಭೀಮಪ್ಪ ಮಾಸ್ತಿ, ಭೀಮಪ್ಪ ಪೂಜಾರ, ವೀರಯ್ಯ ಹಿರೇಮಠ, ಪ್ರವೀಣ ಮೇಟಿ ಸೇರಿದಂತೆ ಇತರರಿದ್ದರು. ಶಿಕ್ಷಕ ರುದ್ರಪ್ಪ ಬೆಲ್ಲದ ನಿರ್ವಹಿಸಿದರು.

ಹಾನಗಲ್ಲ ಕುಮಾರ ಶಿವಯೋಗಿಗಳನ್ನು ಸಮಾಜ ಸಂಜೀವಿನಿ ಎಂದು ಕರೆಯಲಾಗುತ್ತದೆ. ಶಿವಯೋಗ ಮತ್ತು ಧಾರ್ಮಿಕ ಶಿಕ್ಷಣಕ್ಕೆ ಒತ್ತು ನೀಡಿದ ಅವರು, ವಿರಕ್ತರಾಗಿದ್ದರೂ ಲೌಕಿಕ ಶಿಕ್ಷಣದ ಅಗತ್ಯವನ್ನು ಮನಗಂಡಿದ್ದರು. ಆಧ್ಯಾತ್ಮಿಕ ಜ್ಞಾನದೊಂದಿಗೆ ಶಿಕ್ಷಣ ಮತ್ತು ಸಾಮಾಜಿಕ ಸಮಾನತೆಗಾಗಿ ಶ್ರಮಿಸಿದರಲ್ಲದೆ, ಲಿಂಗಾಯತ ಸಮಾಜದ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಪುನರುತ್ಥಾನಕ್ಕೆ ಅಪಾರ ಕೊಡುಗೆ ನೀಡಿದ ಯುಗಪುರುಷರಾಗಿದ್ದಾರೆ ಎಂದು ಅಭಿನವ ಚನ್ನಬಸವ ಸ್ವಾಮೀಜಿ ಹೇಳಿದರು.

---

## ಅನಧಿಕೃತ ಅಂಗಡಿ, ಮುಂಗಟ್ಟುಗಳ ತೆರವು



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮೀಪದ ಅಬ್ಬಿಗೇರಿ ಗ್ರಾಮದ ಪಾಲಾ-ಬದಾಮಿ ರಸ್ತೆ, ನರೇಗಲ್ಲ ರಸ್ತೆಯಲ್ಲಿನ ಅನಧಿಕೃತ ಅಂಗಡಿಗಳ ತೆರವು ಕಾರ್ಯಾಚರಣೆ ಬುಧವಾರ ಜರುಗಿತು.

ಅಬ್ಬಿಗೇರಿ ಗ್ರಾಮದ ಪಾಲಾ-ಬದಾಮಿ ರಸ್ತೆಯಲ್ಲಿನ ಸರ್ಕಾರಿ ಗಂಡುಮಕ್ಕಳ ಹಿರಿಯ ಪ್ರಾಥಮಿಕ ಶಾಲೆ ಹಾಗೂ ಸರ್ಕಾರಿ ಹೆಣ್ಣುಮಕ್ಕಳ ಹಿರಿಯ ಪ್ರಾಥಮಿಕ ಶಾಲೆಗಳ ಕೌಂಪಾಂಡ್ ಸುತ್ತಲೂ ನಿರ್ಮಿಸಲಾಗಿದ್ದ 30ಕ್ಕೂ ಅಧಿಕ ಅನಧಿಕೃತ ಅಂಗಡಿ, ಮುಂಗಟ್ಟುಗಳನ್ನು ತೆರವುಗೊಳಿಸಬೇಕು ಎಂದು ಸಾರ್ವಜನಿಕರು, ಪಾಲಕರು ಲೋಕಾಯುಕ್ತರಿಗೆ ದೂರು ಸಲ್ಲಿಸಿದ್ದರು.

ದೂರು ಆಧರಿಸಿ ಲೋಕಾಯುಕ್ತ ಅಧಿಕಾರಿಗಳು ರೋಣ ತಾ.ಪಂ ಇಒ ಅವರಿಗೆ ಅನಧಿಕೃತ ಅಂಗಡಿ ಮುಂಗಟ್ಟುಗಳನ್ನು ತೆರವುಗೊಳಿಸುವಂತೆ ಸೂಚಿಸಿದ ಹಿನ್ನೆಲೆಯಲ್ಲಿ ಬುಧವಾರ ಕಂದಾಯ ಇಲಾಖೆ, ಲೋಕೋಪಯೋಗಿ ಇಲಾಖೆ, ಪೊಲೀಸ್ ಇಲಾಖೆಯ ಸಿಬ್ಬಂದಿ ತೆರವು ಕಾರ್ಯಾಚರಣೆ ಕೈಗೊಂಡರು.

ರೋಣ ತಹಸೀಲ್ದಾರ ನಾಗರಾಜ ಕೆ, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ ಕಂದಕೂರ, ರೋಣ ಪಿಎಸ್‌ಐ ಪ್ರಕಾಶ ಬಣಕಾರ, ನರೇಗಲ್ಲ ಪಿಎಸ್‌ಐ ಐಶ್ವರ್ಯ ನಾಗರಾಳ, ಜೆಇ ಸಂತೋಷ ನೀಲಣ್ಣವರ, ಸಂಗಯ್ಯ ಗದ್ದನಕೇರಿ, ಪಿಡಿಒ ಲೋಹಿತ್ ಎಂ, ಸಿಆರ್‌ಪಿ ಎಸ್.ಆರ್. ಮೂಲಿಮನಿ ಇದ್ದರು.

---

### ಹಿಂದೂ ಸಮಾವೇಶದ ಪೂರ್ವಭಾವಿ ಸಭೆಯಲ್ಲಿ ಶಾಸಕ ಕೆ. ನೇಮಿರಾಜ್ ನಾಯ್ಕ್

# ಹಿಂದೂಗಳ ಶಕ್ತಿ ಪ್ರದರ್ಶನವಾಗಬೇಕಿದೆ




**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಹಿಂದೂ ಧರ್ಮವು ಜಗತ್ತಿನಲ್ಲಿಯೇ ಅತ್ಯಂತ ಶ್ರೇಷ್ಠ ಧರ್ಮವಾಗಿದ್ದು, ಮಾತೃ ಸ್ಥಾನದಲ್ಲಿದೆ. ಫೆಬ್ರವರಿ 7ರಂದು ಪಟ್ಟಣದಲ್ಲಿ ನಡೆಯಲಿರುವ ಸಮಾವೇಶಕ್ಕೆ ಸಹಸ್ರಾರು ಜನ ಸೇರಬೇಕು. ಹಿಂದೂಗಳ ಶಕ್ತಿ ಎಷ್ಟಿದೆ ಎಂಬುದನ್ನು ಪ್ರದರ್ಶಿಸಬೇಕಿದೆ ಎಂದು ಶಾಸಕ ಕೆ. ನೇಮಿರಾಜ್ ನಾಯ್ಕ್ ಹೇಳಿದರು.

ಅವರು ಪಟ್ಟಣದ ಶ್ರೀ ಕನ್ನಿಕಾಪರಮೇಶ್ವರಿ ದೇವಸ್ಥಾನದಲ್ಲಿ ಹಿಂದೂ ಸಮಾವೇಶದ ಪೂರ್ವಭಾವಿ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಬಿಜೆಪಿ ಮುಖಂಡ ಬಲ್ಲಾಹುಣ್ಸಿ ರಾಮಣ್ಣ ಮಾತನಾಡಿ, ಹಿಂದೂಗಳ ದೌರ್ಬಲ್ಯಗಳನ್ನು ಬಳಸಿಕೊಂಡು ಈ ದೇಶವನ್ನು ಮೊಘಲರು ಸುಮಾರು 800 ವರ್ಷಗಳ ಕಾಲ ಹಾಗೂ ಬ್ರಿಟಿಷರು 250 ವರ್ಷಗಳ ಕಾಲ ಆಳಿದ್ದಾರೆ. ಈಗಲೂ ಹಿಂದೂಗಳಾದ ನಾವೆಲ್ಲರೂ ಎಚ್ಚೆತ್ತುಕೊಳ್ಳದೇ ಹೋದರೆ ಹಿಂದೂ ಧರ್ಮದ ನಾಶ ನಿಶ್ಚಿತ. ಅಲ್ಲದೇ ನಮ್ಮ ರಾಷ್ಟ್ರದಲ್ಲಿ ಹಿಂದೂ ಧರ್ಮವನ್ನು ಉಚ್ಛ್ರಾಯ ಸ್ಥಿತಿಗೆ ಕೊಂಡೊಯ್ದ ಕೀರ್ತಿ ಸ್ವಾಮಿ ವಿವೇಕಾನಂದರಿಗೆ ಸಲ್ಲಬೇಕು ಎಂದು ಅಭಿಪ್ರಾಯಪಟ್ಟರು.

ತಾಲೂಕು ವಾಲ್ಮೀಕಿ ಸಮಾಜದ ಅಧ್ಯಕ್ಷರು ಹಾಗೂ ಪುರಸಭೆ ಸದಸ್ಯರಾದ ಪವಾಡಿ ಹನುಮಂತಪ್ಪ ಮಾತನಾಡಿ, ನಾವೆಲ್ಲರೂ ಸರ್ವ ಸಮಾಜಗಳನ್ನು ಪ್ರೀತಿಸಬೇಕು. ಇಲ್ಲಿ ರಾಜಕೀಯ ಸಲ್ಲದು, ನಾವೆಲ್ಲರೂ ಪಕ್ಷಾತೀತ ಹಾಗೂ ಜಾತ್ಯತೀತರಾಗಿರಬೇಕು ಎಂದರು.

ಬಸವರಾಜ್ ರೆಡ್ಡಿ, ಬಣಜಿಗ ಸಮಾಜದ ಮುಖಂಡ ರಾಚೋಟೆಪ್ಪ ಹಾಗೂ ಕಾಂಗ್ರೆಸ್ ಮುಖಂಡ ಹೆಗ್ಡಾಳ್ ರಾಮಣ್ಣ ಮಾತನಾಡಿದರು. ಮಾಧವಿ ಚಿದ್ರಿ ಪ್ರಾರ್ಥಿಸಿದರು. ಕನ್ನಿಹಳ್ಳಿ ಚಂದ್ರಶೇಖರ್ ಸ್ವಾಗತಿಸಿದರು. ಪುರಸಭೆ ಸದಸ್ಯ ಜೋಗಿ ಹನುಮಂತಪ್ಪ ನಿರೂಪಿಸಿದರು. ಕಾರ್ಯಕ್ರಮದ ಆಶೀರ್ವಚನವನ್ನು ನಂದಿಪುರ ಕ್ಷೇತ್ರದ ಡಾ. ಮಹೇಶ್ವರ ಸ್ವಾಮಿಗಳು ನೀಡಿದರು. ಹಾಲಸ್ವಾಮಿ ಮಠದ ಹಾಲಶಂಕರ ಸ್ವಾಮಿಗಳು ಇದ್ದರು.

ಕಾರ್ಯಕ್ರಮದಲ್ಲಿ ಕಾರ್ಯಕರ್ತರಾದ ಅವಿನಾಶ್ ಜಾಧವ, ಸಂಚಿ ಶಿವಕುಮಾರ, ಗುರುಬಸವರಾಜ, ಸುಭಾಷ್ ಚಂದ್ರ, ಸಂದೀಪ್ ಶಿವಮೊಗ್ಗ, ಮಹಿಳಾ ಕಾರ್ಯಕರ್ತರು, ವಿವಿಧ ಸಮಾಜಗಳ ಮುಖಂಡರು, ಅಧ್ಯಕ್ಷರು ಉಪಸ್ಥಿತರಿದ್ದರು. ಹಿಂದೂ ಸಮಾವೇಶದ ರೂಪುರೇಷೆಗಳು ಹೇಗಿರಬೇಕೆಂದು, ಪುರಸಭೆ ಸದಸ್ಯರೂ ಆದ ಕಮಲಮ್ಮ ಶಿವಮೊಗ್ಗ, ಚಿಂತರಪಳ್ಳಿ ಬಿಜೆಪಿ ಮುಖಂಡ ಜಿ.ಎಸ್. ಬಣಕಾರ ಹಾಗೂ ಹೆಗ್ಡಾಳ ಶ್ರೀನಿವಾಸ್ ಸಲಹೆ-ಸೂಚನೆಗಳನ್ನು ನೀಡಿದರು.

ಪ್ರಾಸ್ತಾವಿಕವಾಗಿ ಡಾ. ಬಂಡ್ರಿ ವಿಶ್ವನಾಥ ಮಾತನಾಡಿ, ಸಂಸ್ಕಾರ, ಸತ್ಸಂಪ್ರದಾಯ ಹಾಗೂ ಸಂಸ್ಕೃತಿಗಳನ್ನು ಮುಂದಿನ ಪೀಳಿಗೆಗೆ ಕೊಂಡೊಯ್ಯುವುದೇ ಹಿಂದೂ ಸಮಾವೇಶದ ಉದ್ದೇಶವಾಗಿದೆ. ನಮ್ಮಲ್ಲಿ ಅಸಂಖ್ಯಾತ ಜಾತಿ, ಭಾಷೆಗಳಿದ್ದು, ಅವೆಲ್ಲವುಗಳನ್ನು ಒಂದುಗೂಡಿಸಿ, ಹಿಂದೂ ಧರ್ಮವನ್ನು ಬೆಳೆಸಬೇಕಿದೆ. ಇದೊಂದು ಪಕ್ಷಾತೀತ, ಜಾತ್ಯಾತೀತ ಕಾರ್ಯಕ್ರಮವಾಗಿದ್ದು, ಹಿಂದೂ ಪರಂಪರೆಯನ್ನು ಉಳಿಸಬೇಕಾಗಿದೆ ಎಂದರು.

---

## ಸಂತ ಸೇವಾಲಾಲ್ ಜಯಂತಿ ಪೂರ್ವಭಾವಿ ಸಭೆ



**■ವಿಜಯಸಾಕ್ಷಿ ಸುದ್ದಿ, ಗದಗ**

ಸಂತ ಸೇವಾಲಾಲ್ ಜಯಂತಿಯನ್ನು ಫೆಬ್ರವರಿ 17ರಂದು ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ವ್ಯವಸ್ಥಿತವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಬುಧವಾರ ಸಂತ ಸೇವಾಲಾಲ್ ಜಯಂತಿ ಕುರಿತು ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಾಲೂಕು ಮಟ್ಟದಲ್ಲಿ ಹಾಸ್ಟೆಲ್, ಶಾಲಾ-ಕಾಲೇಜು, ಗ್ರಾಮ ಪಂಚಾಯಿತಿಯಲ್ಲಿ ಸಂತ ಸೇವಾಲಾಲ್ ಜಯಂತಿಯನ್ನು ವ್ಯವಸ್ಥಿತವಾಗಿ ಆಚರಿಸಲು ಕ್ರಮ ವಹಿಸಬೇಕು. ಎಸ್‌ಎಸ್‌ಎಲ್‌ಸಿ, ಪಿಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ಸಮಾಜದ ವಿದ್ಯಾರ್ಥಿಗಳನ್ನು ಸನ್ಮಾನಿಸುವ ಕಾರ್ಯಕ್ರಮವಿದೆ. ಶಿಷ್ಠಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಬೇಕು. ಸಂತ ಸೇವಾಲಾಲರ ಕುರಿತು ಅಧ್ಯಯನ ಮಾಡಿದವರಿಂದ ಉಪನ್ಯಾಸ ಕಾರ್ಯಕ್ರಮ ಜರುಗಲಿದೆ. ಸಂತ ಸೇವಾಲಾಲ್ ಜಯಂತಿಯನ್ನು ಬಹಳ ಅಚ್ಚುಕಟ್ಟಾಗಿ ಆಚರಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ರವಿಕಾಂತ ಅಂಗಡಿ, ಚಂದ್ರಕಾಂತ ಚೌಹಾಣ, ಪಾಂಡು ಚೌಹಾಣ, ಎನ್.ವಿ. ರಾಠೋಡ, ಕೆ.ಸಿ. ನಬಾಪುರ, ಜಿ.ಡಿ. ನಾಯಕ, ರೂಪಸಿಂಗ್ ಪೂಜಾರ, ತಿಪ್ಪಣ್ಣ ಪವಾರ ಸೇರಿದಂತೆ ಸಮಾಜದ ಹಿರಿಯರು, ಪ್ರಮುಖರು, ಇಲಾಖೆಯ ಅಧಿಕಾರಿಗಳು ಹಾಜರಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸ್ವಾಗತಿಸಿ ವಂದಿಸಿದರು.

## ಇನ್ಕುಬೇಷನ್ ವಿಷಯದ ಕುರಿತು ಕಾರ್ಯಾಗಾರ



■ ವಿಜಯಸಾಕ್ಷಿ ಸುದ್ದಿ, ಗದಗ

ವಿದ್ಯಾರ್ಥಿಗಳಿಗೆ ಸಹಕಾರಿಯಾಗುವ ಉದ್ದೇಶದಿಂದ ಜಿಲ್ಲೆಯ ವಿದ್ಯಾರ್ಥಿಗಳಿಗೆ ರೈಸಿಂಗ್ & ಆಕ್ಸಿಲರೇಟಿಂಗ್ ಎಂ.ಎಸ್.ಎಂ.ಇ ಪರ್ಫಾರ್ಮೆನ್ಸ್(RAMP) ಯೋಜನೆಯಡಿಯಲ್ಲಿ ಕೈಗಾರಿಕೆ ಮತ್ತು ವಾಣಿಜ್ಯ ಇಲಾಖೆ, ಜಿಲ್ಲಾ ಕೈಗಾರಿಕಾ ಕೇಂದ್ರ ಗದಗ ಹಾಗೂ ಕರ್ನಾಟಕ ಸ್ಟೇಟ್ ಮಾರ್ಕೆಟಿಂಗ್ ಕಮ್ಯುನಿಕೇಶನ್ & ಅಡ್ವರ್ಟೈಜಿಂಗ್ ಲಿ ಬೆಂಗಳೂರು ಇವರ ಸಹಯೋಗದಲ್ಲಿ ಇನ್ಕುಬೇಷನ್ ವಿಷಯದ ಕುರಿತ ಕಾರ್ಯಾಗಾರವು ಲಕ್ಷ್ಮೇಶ್ವರದ ಕಮಾಲಾ ಮತ್ತು ವೆಂಕಪ್ಪ ಎಂ.ಅಗಡಿ ಕಾಲೇಜಿನಲ್ಲಿ ಜರುಗಿತು.

ಕಾರ್ಯಾಗಾರದಲ್ಲಿ ಕಾಲೇಜಿನ ಪ್ರಾಂಶುಪಾಲ ಡಾ. ಪರಶುರಾಮ ಬಾರಕಿ, ಕಾಲೇಜಿನ ಡೀನ್ ರಿಸರ್ಚ್ ಅಕ್ರೆಡಿಟೇಶನ್ ಡಾ. ಆರ್.ಎಂ. ಪಾಟೀಲ್, ಕಾಲೇಜಿನ ಡೀನ್-ಅಕಾಡೆಮಿಕ್ ಡಾ. ಸುಭಾಸ್ ಮೇಟಿ, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಪ್ರಶಾಂತ ಪಿ.ಬಾರಿಗಿಡದ ಭಾಗವಹಿಸಿದ್ದರು.


ಕಾರ್ಯಾಗಾರದ ಸಂಪನ್ಮೂಲ ವ್ಯಕ್ತಿಗಳಾದ ಡಾ. ಸಿರಿಲ್ ಪ್ರಸನ್ನ ರಾಜ್ ಪಿ ಇನ್ಕುಬೇಷನ್ ಕುರಿತಂತೆ ಪಿ.ಪಿ.ಟಿ ಪ್ರೆಸೆಂಟೇಷನ್ ಮೂಲಕ ಉಪನ್ಯಾಸ ನೀಡಿದರು. ಅಗಡಿ ಇಂಜಿನಿಯರಿಂಗ್ ಕಾಲೇಜಿನ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಬಾಲ್ಯವನ್ನು ಕ್ಯಾಮೆರಾ ಮುಂದೆ ಅಲ್ಲ, ಸುರಕ್ಷಿತ ನೆನಪುಗಳಲ್ಲಿ ಉಳಿಸೋಣ

# ಲೈಕ್ ಮುಖ್ಯವೋ, ಮಕ್ಕಳ ಭವಿಷ್ಯವೋ?

ಇತ್ತೀಚೆಗೆ ನಡೆದ ಸದನದಲ್ಲಿ ಡಾ. ಸುಧಾ ಮೂರ್ತಿ ಇಡೀ ಸಭೆಯ ಗಮನ ಸೆಳೆದರು. ಮಕ್ಕಳನ್ನು ಆನ್‌ಲೈನ್ ಕಂಟೆಂಟ್ ಯಂತ್ರಗಳಾಗಿ ಬಳಸುತ್ತಿರುವ ಪೋಷಕರ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿ, ಅದೆಷ್ಟೋ ಪೋಷಕರು ತಮ್ಮ ಮಕ್ಕಳನ್ನು ವಿವಿಧ ವೇಷ ಹಾಕಿ ಅಲಂಕರಿಸುತ್ತಾರೆ, ಅವರನ್ನು ಪ್ರದರ್ಶನದ ಗೊಂಬೆಗಳಂತೆ ಬಿಂಬಿಸುತ್ತಾರೆ. ಇವೆಲ್ಲಾ ತಯಾರಿ ತಮ್ಮ ಖುಷಿಗಾಗಿ ಅಲ್ಲ, ಸೋಷಿಯಲ್ ಮೀಡಿಯಾಗಳಲ್ಲಿ ಪೋಸ್ಟ್ ಮಾಡುವ ರೀಲ್, ಶಾರ್ಟ್‌ಗಳಿಗಾಗಿ! ಈ ತಯಾರಿಯ ಉದ್ದೇಶ ತಮ್ಮ ಕಂಟೆಂಟ್‌ಗಳಿಗೆ ಹೆಚ್ಚು ಹೆಚ್ಚು ವೀವ್ಸ್, ಲೈಕ್ಸ್ ಪಡೆಯುವುದಷ್ಟೇ. ಇದು ಪಾಲಕರಿಗೆ ಒಂದಷ್ಟು ಕಾಸು ತಂದುಕೊಡುವ ಚಟುವಟಿಕೆಯಾದರೂ, ಪಾಪ, ಆ ಮಕ್ಕಳ ಬಗ್ಗೆ ಯಾರೂ ಯೋಚಿಸುತ್ತಲೇ ಇಲ್ಲವಲ್ಲ ಎಂಬ ಪ್ರಶ್ನೆಯನ್ನು ಮುಂದಿಟ್ಟರು.

ಹೌದಲ್ಲ, ಇದರ ಬಗ್ಗೆ ಪಾಲಕರು ಎಂದಿಗೂ ಯೋಚಿಸುವುದೇ ಇಲ್ಲ. ಯೋಚಿಸಿದ್ದೇ ಆದರೆ, ಅವರು ತಮ್ಮ ಮಕ್ಕಳನ್ನು ಈ ರೀತಿ ಬಳಸಿಕೊಳ್ಳುತ್ತಲೂ ಇರಲಿಲ್ಲ. ಮಕ್ಕಳು ತಮ್ಮ ಮುಗ್ಧತೆಯನ್ನು



ಕಳೆದುಕೊಳ್ಳುತ್ತಾರೆ, ಅವರಿಗೆ ಏನು ನಡೆಯುತ್ತಿದೆ ಎಂಬ ಅರಿವೇ ಇಲ್ಲದ ಕಾರಣ, ಮುಂದದಿನ ಪರಿಣಾಮವನ್ನೂ ಊಹಿಸಲು ಸಾಧ್ಯವಿಲ್ಲ ಎಂದು ಡಾ. ಸುಧಾ ಮೂರ್ತಿ ಎಚ್ಚರಿಸಿದರು. ಭಾರತದಲ್ಲಿ ಸಿನಿಮಾ ಮತ್ತು ಜಾಹೀರಾತುಗಳಲ್ಲಿ ಬಾಲ ಕಲಾವಿದರಿಗಾಗಿ ಕಠಿಣ ನಿಯಮಗಳಿವೆ. ಆದರೆ ಸಾಮಾಜಿಕ ಮಾಧ್ಯಮಗಳಲ್ಲಿ ಮಕ್ಕಳನ್ನು ವಾಣಿಜ್ಯೀಕರಿಸುವ ವಿಷಯಕ್ಕೆ ಸಂಬಂಧಿಸಿದಂತೆ ಸ್ಪಷ್ಟ ಮತ್ತು ಬಲವಾದ ನಿಯಮಗಳಿಲ್ಲ ಎಂಬ ಸುಧಾ ಮೂರ್ತಿಯವರ ವಿಚಾರ ಒಪ್ಪಲೇಬೇಕಿದೆ.

ಒಂದು ಕಾಲದಲ್ಲಿ ಮಕ್ಕಳ ಫೋಟೋ ಆಲ್ಬಂ ಮನೆಯ ಕಪಾಟಿನಲ್ಲಿರುತ್ತಿತ್ತು. ಇಂದು ಅದು ಇನ್‌ಸ್ಟಾಗ್ರಾಂ, ಯೂಟ್ಯೂಬ್, ಫೇಸ್‌ಬುಕ್ ಟೈಮ್‌ಲೈನ್‌ನಲ್ಲಿರುತ್ತಿದೆ. ಮುದ್ದಾದ ನಗು, ಅಳುವ ಕ್ಷಣ, ಮುಜುಗರದ ಮಾತು, ಶಾಲೆಯ ಮೊದಲ ದಿನ ಎಲ್ಲವೂ ಈಗ ಖುಲ್ಲಂಖುಲ್ಲಾ! ಪಾಲಕರಿಗೆ ಇದು ಹೆಮ್ಮೆ. ಆದರೆ ಇದು ಮಕ್ಕಳ ಹಕ್ಕುಗಳಿಗೆ ವಿರುದ್ಧವಲ್ಲವೇ? ಇಷ್ಟು ಚಿಕ್ಕ ವಯಸ್ಸಿನಲ್ಲಿ ಮಕ್ಕಳು ತಮ್ಮ ಒಪ್ಪಿಗೆ ನೀಡಲು ಅಸಮರ್ಥರು. ಈ ವೀಡಿಯೊ ಯಾರು ನೋಡುತ್ತಾರೆ, ಎಲ್ಲಿ ಡೌನ್‌ಲೋಡ್ ಆಗುತ್ತದೆ, ಹೇಗೆ ದುರುಪಯೋಗವಾಗಬಹುದು... ಅವರಿಗೇನು ಗೊತ್ತಾದೀತು ಹೇಳಿ?!

ಆದರೂ ಅವರ ಖಾಸಗಿ ಸಮಯ ಸಾರ್ವಜನಿಕವಾಗಿಯೇ ಪ್ರದರ್ಶನಗೊಳ್ಳುತ್ತಿದೆ. ಇದು ಗೌಪ್ಯತೆ ಹಕ್ಕಿನ ಸ್ಪಷ್ಟ ಉಲ್ಲಂಘನೆಯಲ್ಲವೇ? ಇಂದು ಮುದ್ದಾಗಿ ಕಾಣಿಸುವ ವೀಡಿಯೊಗಳು ನಾಳೆ ಶಾಲೆಯಲ್ಲಿ ತಮಾಷೆಯಾಗಬಹುದು, ಮುಂದಿನ ದಿನಗಳಲ್ಲಿ ಅವಮಾನಕ್ಕೆ ಕಾರಣವಾಗಬಹುದು, ಉದ್ಯೋಗ, ವೈಯಕ್ತಿಕ ಬದುಕಿನಲ್ಲೂ ಏಟು ನೀಡಬಹುದು.

ನೆನಪಿಡಿ, ಇಂಟರ್ನೆಟ್‌ನ ಸಾಮಾಜಿಕ ಜಾಲತಾಣಗಳು ಒಂದು ಬಾರಿ ಏನನ್ನಾದರೂ ಸ್ವೀಕರಿಸಿದರೆ, ಅದನ್ನು ಸಂಪೂರ್ಣ ಅಳಿಸುವುದು ಅಸಾಧ್ಯ ಎಂಬುದು ಇಂತಹ ಪಾಲಕರ ಗಮನಕ್ಕಿರಲಿ.

ಇದರ ಮತ್ತೊಂದು ಕತ್ತಲೆಯ ಮುಖವೂ ಇದೆ. ಮಕ್ಕಳ ವೀಡಿಯೊಗಳನ್ನು ಪೆಡೋಫೈಲ್‌ಗಳು ಗಮನಿಸುವುದು, ಡೌನ್‌ಲೋಡ್ ಮಾಡಿ ಬೇರೆ ಉದ್ದೇಶಗಳಿಗೆ ಬಳಸುವುದು ಹೊಸ ವಿಷಯವೇನಲ್ಲ.

ಪಾಲಕರಿಗೆ ಅದು ನಿರಪರಾಧವಾಗಿರಬಹುದು. ಆದರೆ ಇಂಟರ್ನೆಟ್ ಲೋಕಕ್ಕಲ್ಲ!

ಇದರಿಂದ ಉಂಟಾಗಬಹುದಾದ ಇನ್ನೊಂದು ಅಪಾಯ ಮಾನಸಿಕ ಒತ್ತಡ. ನಿರಂತರವಾಗಿ ಕ್ಯಾಮೆರಾ ಎದುರು ನಿಲ್ಲುವ ಮಗು ನಿಧಾನವಾಗಿ ಬಸವಳಿಯುತ್ತದೆ. ನಕ್ಕರೆ ಲೈಕ್, ಅತ್ತರೆ ವೀವ್ಸ್, ಡೈಲಾಗ್ ಹೇಳಿದರೆ ಶೇರ್...ಹೀಗೆ ಮಕ್ಕಳ ಬಾಲ್ಯ ಆಟವಾಗದೇ ಪ್ರದರ್ಶನವಾಗುತ್ತದೆ. ಇವೆಲ್ಲಕ್ಕಿಂತ ದೊಡ್ಡ ಅಪಾಯವೂ ಒಂದಿದೆ. ಮುಂದೊಂದು ದಿನ ನಿಮ್ಮದೇ ಮಕ್ಕಳು ನಿಮ್ಮನ್ನು ಪ್ರಶ್ನಿಸಬಹುದು. "ನನ್ನ ಅನುಮತಿಯಿಲ್ಲದೇ ನನ್ನ ಬದುಕನ್ನು ಹೇಗೆ ಸಾರ್ವಜನಿಕಗೊಳಿಸಿದರಿ?" ಆಗ ನಿಮ್ಮ ಬಳಿ ಉತ್ತರವಿಲ್ಲದೇ ಹೋದೀತು. ನೆನಪಿಡಿ, ಮಕ್ಕಳು ನಿಮ್ಮ ತಲೆಯಲ್ಲಿರುವ ಕಂಟೆಂಟ್‌ಗಳಿಗೆ ಕುಣಿಯುವ ಕಲಾವಿದರಲ್ಲ. ಬಾಲ್ಯವನ್ನು ಕ್ಯಾಮೆರಾ ಮುಂದೆ ಅಲ್ಲ, ಸುರಕ್ಷಿತ ನೆನಪುಗಳಲ್ಲಿ ಉಳಿಸೋಣ.

## ಆಶೋತ್ತರಗಳ ಈಡೇರಿಕೆಯ ಬಜೆಟ್



■ ವಿಜಯಸಾಕ್ಷಿ ಸುದ್ದಿ, ಗದಗ

ಜಾಗತಿಕ ಮಟ್ಟದಲ್ಲಿ ಅನೇಕ ರಾಷ್ಟ್ರಗಳು ಆರ್ಥಿಕವಾಗಿ ಸಂಕಷ್ಟದಲ್ಲಿದ್ದರೂ ಭಾರತದಲ್ಲಿ ಆರ್ಥಿಕ ಉನ್ನತಿಯನ್ನು ಸಾಧಿಸುವ ನಿಟ್ಟಿನಲ್ಲಿ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಅವರು ಮಂಡಿಸಿರುವ ಬಜೆಟ್ ಪ್ರತಿ ಭಾರತೀಯನ ಆಶೋತ್ತರಗಳ ಈಡೇರಿಕೆಯ ಬಜೆಟ್ ಆಗಿದೆ ಎಂದು ಬಿಜೆಪಿ ಮುಖಂಡ ವಿಜಯಕುಮಾರ ಗಡ್ಡಿ ಅಭಿಪ್ರಾಯಪಟ್ಟಿದ್ದಾರೆ.

ವಿತ್ತೀಯ ಕೊರತೆಯನ್ನು ನಿಯಂತ್ರಿಸಿದ್ದು ಬಹುದೊಡ್ಡ ಸಾಧನೆಯಾಗಿದೆ. ಎಲೆಕ್ಟ್ರಾನಿಕ್ಸ್ ಉತ್ಪಾದನೆಗೆ 40 ಸಾವಿರ ಕೋಟಿ ಅನುದಾನ ನೀಡಲಾಗಿದೆ. ಬಯೋಫಾರ್ಮಾ ವಲಯಕ್ಕೆ 10 ಸಾವಿರ ಕೋಟಿ ಹೂಡಿಕೆ, ರಕ್ಷಣಾ ವಲಯದ ಆಧುನೀಕರಣಕ್ಕೆ 2.19 ಲಕ್ಷ ಕೋಟಿ ಮೀಸಲಿರಿಸಲಾಗಿದೆ. 20 ಹೊಸ ರಾಷ್ಟ್ರೀಯ ಜಲಮಾರ್ಗಗಳಿಗೆ ಅಂಕಿತ ನೀಡಲಾಗಿದೆ. ರೈತರ ಹಿತಕಾಯಲು ಬೆಳೆಗಳ ರಫ್ತಿಗೆ ಉತ್ತೇಜನ ಹಾಗೂ ಅನೇಕ ಬೆಳೆಗಳಿಗೆ ಸಂಬಂಧಿಸಿದಂತೆ ನಿಯಮಗಳನ್ನು ಸಡಿಲಿಸಲಾಗಿದೆ.

3 ಹೊಸ ಅಖಿಲ ಭಾರತ ಆಯುರ್ವೇದ ಸಂಸ್ಥೆಗಳನ್ನು ಸ್ಥಾಪಿಸಲಾಗುತ್ತಿದೆ. ಎಲ್ಲರನ್ನೂ ತಲುಪುವ ಬಜೆಟ್ ಇದಾಗಿದ್ದು, ವಿಕಸಿತ ಭಾರತಕ್ಕೆ ಅಡಿಪಾಯ ಹಾಕಬಲ್ಲ ಬಜೆಟ್ ಇದಾಗಿದೆ. ವಿಶೇಷವಾಗಿ ಕರ್ನಾಟಕಕ್ಕೆ ಸಂಬಂಧಿಸಿದಂತೆ ಬೆಂಗಳೂರಿನ ಊಟಿ ಕಂಪನಿಗಳಿಗೆ ತೆ-ರಿಗೆ ವಿನಾಯಿತಿ ನೀಡಿದೆ. ಕಾರಿಡರ್‌ಗಳ ಸಂಪರ್ಕದಿಂದ ಆರ್ಥಿಕ ವೃದ್ಧಿ ಉಂಟಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.


## ನಾನು ಜೀವನದ ಕೊನೆಗಾಲದಲ್ಲಿ ಇದ್ದೇನೆ-ಈ ವೃದ್ಧನ ಮನವಿಗೆ ಸ್ಪಂದಿಸಿ!

■ ವಿಜಯಸಾಕ್ಷಿ ಸುದ್ದಿ, ದೆಹಲಿ

ಮಾಜಿ ಪ್ರಧಾನಿ ಎಚ್ ಡಿ ದೇವೇಗೌಡರು ಕರ್ನಾಟಕದಲ್ಲಿ ಉಂಟಾಗಿರುವ ಗಂಭೀರ ಕುಡಿಯುವ ನೀರಿನ ಬಿಕ್ಕಟ್ಟಿನ ಬಗ್ಗೆ ರಾಜ್ಯಸಭೆಯಲ್ಲಿ ಗದ್ಗದಿತರಾಗಿ ಮಾತನಾಡಿದ್ದಾರೆ.

ಅವರು ತಮ್ಮ ಭಾಷಣದಲ್ಲಿ, ರಾಜ್ಯದ ಅನೇಕ ನೀರಾವರಿ ಯೋಜನೆಗಳು ನೆನೆಗುದಿಗೆ ಬಿದ್ದಿದ್ದು, ರೈತರು ಮತ್ತು ಗ್ರಾಮೀಣ ಜನತೆ ತೀವ್ರ ಸಂಕಷ್ಟದಲ್ಲಿದ್ದಾರೆ ಎಂದು ವಿವರಿಸಿದರು. "ನಾನು ಜೀವನದ ಕೊನೆಗಾಲದಲ್ಲಿ ಇದ್ದೇನೆ, ಈ ವೃದ್ಧನ ಮನವಿಗೆ ಮಾನವೀಯತೆಯಿಂದ ಸ್ಪಂದಿಸಿ" ಎಂದು ದೇವೇಗೌಡರು ಕೈ ಮುಗಿದು ಬೇಡಿಕೊಂಡರು.

ಅವರು ರಾಜ್ಯದ ನೆರೆ ರಾಜ್ಯಗಳೊಂದಿಗೆ ನೀರಿನ ಹಕ್ಕಿಗಾಗಿ ಹೋರಾಟ ಮಾಡುತ್ತಿರುವುದನ್ನು ಹಾಗೂ 65 ವರ್ಷಗಳಿಂದ ನೀರಿಗಾಗಿ ಹೋರಾಟ ನಡೆಸುತ್ತ ಬಂದಿರುವ ತಮ್ಮ ಅನುಭವವನ್ನು ಪ್ರಸ್ತಾಪಿಸಿದರು. ದೇವೇಗೌಡರು,



ನ್ಯಾಯಮಂಡಳಿಗಳ ತೀರ್ಪುಗಳನ್ನು ಚರ್ಚಿಸಲು ಬಯಸುವುದಿಲ್ಲ, ಆದರೆ ಕರ್ನಾಟಕಕ್ಕೆ ನೀರಿನ ಸಮಸ್ಯೆ ಅತ್ಯಂತ ತೀವ್ರವಾಗಿದೆ ಎಂದು ಹೇಳಿದರು.

ಕೇಂದ್ರ ಸರ್ಕಾರ ತಕ್ಷಣ ಕ್ರಮ ಕೈಗೆಣಟಿಜಜಜಿಟಿಜಜಳ್ಳಿ ಮತ್ತು ರಾಜ್ಯದ ರೈತರಿಗೆ ಮತ್ತು ನಾಗರಿಕರಿಗೆ ನೀರಿನ ನ್ಯಾಯ ಒದಗಿಸಬೇಕು ಎಂಬುದು. ಇದೇ ವೇಳೆ ಅವರು ಮೋದಿ ಸರ್ಕಾರದ ಯಶಸ್ವಿ ಆರ್ಥಿಕ ಮತ್ತು ವ್ಯಾಪಾರ ಕಾರ್ಯತಂತ್ರಗಳನ್ನು ಶ್ಲಾಘಿಸಿ, 2047ರೊಳಗೆ ಭಾರತವು ವಿಕಸಿತ ರಾಷ್ಟ್ರವಾಗುವುದರಲ್ಲಿ ಯಾವುದೇ ಸಂಶಯವಿಲ್ಲ ಎಂದು ಪ್ರಸ್ತಾಪಿಸಿದರು.

## ಪ.ಬಂಗಾಳವನ್ನು ಗುರಿಯಾಗಿಸಲಾಗುತ್ತಿದೆ, ಅಸ್ಸಾಂನಲ್ಲಿ ಎಸ್‌ಐಆರ್ ಏಕಿಲ್ಲ? : ಸುಪ್ರೀಂ ಕೋರ್ಟ್‌ನಲ್ಲಿ ಮಮತಾ ಬ್ಯಾನರ್ಜಿ ವಾದ

■ ವಿಜಯಸಾಕ್ಷಿ ಸುದ್ದಿ, ಕೋಲ್ಕತ್ತಾ

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆಯಲ್ಲಿ ಪಶ್ಚಿಮ ಬಂಗಾಳವನ್ನು ಗುರಿಯಾಗಿಸಲಾಗಿದೆ ಎಂದು ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಬುಧವಾರ (ಫೆ.4) ಆರೋಪಿಸಿದ್ದು, ಬಿಜೆಪಿ ಆಡಳಿತವಿರುವ ಅಸ್ಸಾಂನಲ್ಲಿ ಏಕೆ ಎಸ್‌ಐಆರ್ ನಡೆಸುತ್ತಿಲ್ಲ ಎಂಬುವುದಾಗಿ ಪ್ರಶ್ನಿಸಿದ್ದಾರೆ ಎಂದು ಲೈವ್ ಲಾ ವರದಿ ಮಾಡಿದೆ.



ಚುನಾವಣಾ ಆಯೋಗವು ಅಸ್ಸಾಂನಲ್ಲಿ ಮತದಾರರ ಪಟ್ಟಿಯ ವಿಶೇಷ ಪರಿಷ್ಕರಣೆಯನ್ನು ನಡೆಸುತ್ತಿದೆ, ಇದು ಮತದಾರರ ಪಟ್ಟಿಯ ಸಾಮಾನ್ಯ ನವೀಕರಣಗಳಂತೆಯೇ ಇರುತ್ತದೆ.

ಪಶ್ಚಿಮ ಬಂಗಾಳದ ಎಸ್‌ಐಆರ್ ಪ್ರಕ್ರಿಯೆಯನ್ನು ಪ್ರಶ್ನಿಸಿ ಸಲ್ಲಿಸಲಾಗಿರುವ ಅರ್ಜಿಯ ವಿಚಾರಣೆ ಬುಧವಾರ ಸುಪ್ರೀಂ ಕೋರ್ಟ್‌ನಲ್ಲಿ ನಡೆಯುತ್ತಿದ್ದು, ತನ್ನ ಅರ್ಜಿಯ ಪರ ವಾದ ಮಂಡಿಸಲು ಸ್ವತಃ ಮಮತಾ ಬ್ಯಾನರ್ಜಿಯೇ ನ್ಯಾಯಾಲಯಕ್ಕೆ ಹಾಜರಾಗಿದ್ದಾರೆ.

ವರದಿಗಳ ಪ್ರಕಾರ, ಮುಖ್ಯಮಂತ್ರಿಯೊಬ್ಬರು ಸುಪ್ರೀಂ ಕೋರ್ಟ್ ಮುಂದೆ ವೈಯಕ್ತಿಕವಾಗಿ ಹಾಜರಾಗಿ ಮೌಖಿಕ ವಾದ ಮಂಡಿಸುತ್ತಿರುವುದು ಭಾರತದ ಇತಿಹಾಸದಲ್ಲಿ ಇದೇ ಮೊದಲು.

ಪ್ರಕರಣದ ಸಂಬಂಧ ನ್ಯಾಯಾಲಯಕ್ಕೆ ಹಾಜರಾಗಿ ವಾದ ಮಂಡಿಸಲು ಅನುಮತಿ ಕೋರಿ ಮಮತಾ ಬ್ಯಾನರ್ಜಿ ಸುಪ್ರೀಂ ಕೋರ್ಟ್‌ಗೆ ಮಧ್ಯಂತರ ಅರ್ಜಿ ಸಲ್ಲಿಸಿದ್ದರು ಎಂದು ಬಾರ್ ಮತ್ತು ಬೆಂಚ್ ವರದಿ ಮಾಡಿದೆ.

ಎಸ್‌ಐಆರ್ ಪ್ರಕ್ರಿಯೆಯಿಂದಾಗಿ ಪಶ್ಚಿಮ ಬಂಗಾಳದ ನಿವಾಸಿಗಳು ಎದುರಿಸುತ್ತಿರುವ ವಾಸ್ತವಗಳ ಬಗ್ಗೆ ತನಗೆ ಅರಿವಿದೆ ಎಂದು ಅವರು ತಮ್ಮ ಮಧ್ಯಂತರ ಅರ್ಜಿಯಲ್ಲಿ ತಿಳಿಸಿದ್ದಾರೆ ವರದಿ ತಿಳಿಸಿದೆ.

ತಾನು ವೈಯಕ್ತಿಕವಾಗಿ ಹಾಜರಾಗುವುದರಿಂದ ಪ್ರಕರಣದ ಪರಿಣಾಮಕಾರಿ ತೀರ್ಪು ನೀಡಲು ನ್ಯಾಯಾಲಯಕ್ಕೆ ಸಹಾಯವಾಗುತ್ತದೆ ಎಂದು ಮಮತಾ ಬ್ಯಾನರ್ಜಿ ತನ್ನ ಅರ್ಜಿಯಲ್ಲಿ ಹೇಳಿದ್ದಾರೆ ಎಂದು ವರದಿ ವಿವರಿಸಿದೆ.

ಪಶ್ಚಿಮ ಬಂಗಾಳದಲ್ಲಿ ಚುನಾವಣಾ ಆಯೋಗ ಕೈಗೊಂಡಿರುವ ಎಸ್‌ಐಆರ್ ಪ್ರಕ್ರಿಯೆಯ ವಿರುದ್ಧ ಜನವರಿ 28ರಂದು ಮಮತಾ ಬ್ಯಾನರ್ಜಿ ಸುಪ್ರೀಂ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ಎಸ್‌ಐಆರ್ ಚುನಾವಣಾ ಆಯೋಗದ ಅಪಾರದರ್ಶಕ, ಆತುರದ, ಅಸಂವಿಧಾನಿಕ ಮತ್ತು ಕಾನೂನುಬಾಹಿರ ಕ್ರಮ ಎಂದು ಅವರು ವಾದಿಸಿದ್ದು, ಲಕ್ಷಾಂತರ ಜನರ ಹಕ್ಕು ಕಸಿದುಕೊಳ್ಳಲಿದೆ ಎಂದು ಹೇಳಿದ್ದಾರೆ.

'ತಾರ್ಕಿಕ ವ್ಯತ್ಯಾಸ' (Logical Discrepancy-LD) ವರ್ಗದ ಅಡಿಯಲ್ಲಿ ವ್ಯಕ್ತಿಗಳ ವರ್ಗೀಕರಣದಲ್ಲಿ ಗಂಭೀರ ಅಕ್ರಮಗಳಿವೆ ಎಂದು ಮಮತಾ ಬ್ಯಾನರ್ಜಿ ಆರೋಪಿಸಿದ್ದಾರೆ. ನ್ಯಾಯಾಲಯದ ನಿರ್ದೇಶನಗಳ ಹೊರತಾಗಿಯೂ ಅಂತಹ ವ್ಯಕ್ತಿಗಳ ಪಟ್ಟಿಯನ್ನು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡಲಾಗಿಲ್ಲ ಎಂದು ಅವರು ತಿಳಿಸಿದ್ದಾರೆ.

ಅಧಿಕೃತ ಪೋರ್ಟಲ್‌ನಲ್ಲಿ ಎಲ್‌ಡಿ ಪಟ್ಟಿಯನ್ನು ಪ್ರಕಟಿಸದಿರುವುದು ಪಾರದರ್ಶಕತೆಯ ಕೊರತೆಗೆ ಕಾರಣವಾಗಿದೆ. ಈ ಪಟ್ಟಿಯನ್ನು ಸಾರ್ವಜನಿಕಗೊಳಿಸದ ಕಾರಣ, ಇದರಿಂದ ಬಾಧಿತರಾಗುವ ವ್ಯಕ್ತಿಗಳಿಗೆ ಸೂಕ್ತವಾಗಿ ಪ್ರತಿಕ್ರಿಯಿಸಲು ಅಥವಾ ತಮ್ಮ ಆಕ್ಷೇಪಣೆಗಳನ್ನು ಸಲ್ಲಿಸಲು ಅವಕಾಶ ಸಿಗದಂತಾಗಿದೆ ಎಂದು ಮಮತಾ ಬ್ಯಾನರ್ಜಿ ಹೇಳಿದ್ದಾರೆ. ಪ್ರಸ್ತುತ ನಡೆಯುತ್ತಿರುವ ಎಸ್‌ಐಆರ್ ಪ್ರಕ್ರಿಯೆಯ ಮೇಲೆ ನನಗೆ ನಂಬಿಕೆ ಇಲ್ಲ. ಈ ಹೊಸ ಪ್ರಕ್ರಿಯೆಯ ಬದಲಾಗಿ ಕಳೆದ ವರ್ಷ ಸಿದ್ಧಪಡಿಸಲಾದ ಅಸ್ತಿತ್ವದಲ್ಲಿರುವ ಮತದಾರರ ಪಟ್ಟಿಯ ಆಧಾರದ ಮೇಲೆಯೇ ಚುನಾವಣೆಗಳನ್ನು ನಡೆಸಬೇಕು ಎಂದು ನಿರ್ದೇಶನ ನೀಡುವಂತೆ ನ್ಯಾಯಾಲಯವನ್ನು ಕೋರಿದ್ದಾರೆ.

ಅರ್ಜಿ ವಿಚಾರಣೆ ವೇಳೆ ಚುನಾವಣಾ ಆಯೋಗದ ಪರ ನ್ಯಾಯಾಲಯಕ್ಕೆ ಹಾಜರಾದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರು, ಚುನಾವಣಾ ಆಯೋಗದ ಅಧಿಕಾರಿಗಳ ವಿರುದ್ಧ ರಾಜ್ಯದಲ್ಲಿ (ಪಶ್ಚಿಮ ಬಂಗಾಳದಲ್ಲಿ) "ಹಗೆತನದ ವಾತಾವರಣ" ಇದೆ ಎಂದು ಹೇಳಿರುವುದಾಗಿ ಲೈವ್ ಲಾ ವರದಿ ಮಾಡಿದೆ.

## ಜ್ಯೋತಿಷ್ಯ ಕೇಳಲು ಬಂದ ಯುವತಿ ಮೇಲೆ ಅತ್ಯಾಚಾರ ಆರೋಪ; ಅರ್ಚಕನ ವಿರುದ್ಧ ದೂರು!

■ ವಿಜಯಸಾಕ್ಷಿ ಸುದ್ದಿ, ಚಿಕ್ಕಮಗಳೂರು

ಮದುವೆಯ ಬಗ್ಗೆ ತನ್ನ ಬಳಿ ಜ್ಯೋತಿಷ್ಯ ಕೇಳಲು ಬಂದ ಯುವತಿ ಮೇಲೆ ಅರ್ಚಕ ಅತ್ಯಾಚಾರ ಎಸಗಿರುವ ಆರೋಪ ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕು ಬಣಕಲ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಜರುಗಿದೆ.

ದಾವಣಗೆರೆ ಮೂಲದ ಕಾಮುಕ ಅರ್ಚಕ ಕೃಷ್ಣ ರಾವ್, 7 ವರ್ಷಗಳ ಹಿಂದಯೇ ಚಿಕ್ಕಮಗಳೂರು ಜಿಲ್ಲೆ ಮೂಡಿಗೆರೆಯ ಹೊರಟ್ಟಿ ಗ್ರಾಮಕ್ಕೆ ಬಂದು ನೆಲೆಸಿದ್ದು, ಗ್ರಾಮದ ಪಾರ್ವತಿ ಈಶ್ವರ ದೇಗುಲದ ಅರ್ಚಕನಾಗಿ ಕೆಲಸ ಮಾಡಿಕೊಂಡಿದ್ದ.

ಜೊತೆ ಜೊತೆಗೆ ಜ್ಯೋತಿಷ್ಯವನ್ನ ಸಹ ಹೇಳುತ್ತಿದ್ದ. ಹೀಗಾಗಿ ದಲಿತ ಸಮುದಾಯದ 23 ವರ್ಷದ ಯುವತಿಯೊಬ್ಬು ಬಂದಿದ್ದು, ಮದುವೆ ವಿಷಯದಲ್ಲಿ ತೊಂದರೆ ಆಗುತ್ತಿದೆ ಎಂದು ಅಳಲು ತೋಡಿಕೊಂಡಿದ್ದಾಳೆ. ಆಕೆಯ ಮುಗ್ದತೆಯನ್ನೇ ಬಂಡವಾಳ ಮಾಡಿಕೊಂಡ ಕೃಷ್ಣ ರಾವ್, ಯುವತಿ ಮೇಲೆ ಹಲವು ಸಲ ಅತ್ಯಾಚಾರ ಮಾಡಿದ್ದಾನೆ.

ಜಾತಕದಲ್ಲಿ ದೋಷ ಇದೆ ಎಂದು ಹೇಳಿದ್ದು, ಅದನ್ನು ಸಮಸ್ಯೆ ನಿವಾರಣೆ ಹೆಸರಲ್ಲಿ ಯುವತಿ ಮೇಲೆ ಕಳೆದೊಂದು ವರ್ಷದಲ್ಲಿ ಹಲವು ಸಲ ಅತ್ಯಾಚಾರ ಮಾಡಿದ್ದಾನೆ. ಇದೀಗ ಈಗ ಯುವತಿ ಬಣಕಲ್ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದು, ಈ ದೂರನ್ನಾಧರಿಸಿ ಪೊಲೀಸರು, ಆರೋಪಿ ವಿರುದ್ಧ ಃಓಖ ಕಲಂ 64(2)(ಟ) ಹಾಗೂ ಅತ್ಯಾಚಾರ ತಡೆ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ಮಕ್ಕಳಿಗೆ ಮೊಬೈಲ್ ಗೀಳು ಬೆಳೆಸಬೇಡಿ




■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮಂಗಳಾ ಎಜ್ಯುಕೇಶನ್ ಟ್ರಸ್ಟ್‌ನ ಮಂಗಳಾ ಬಚಪನ್ ಪ್ಲೇಸ್ಕೂಲ್ ಮಕ್ಕಳಿಗೆ ಶಿಕ್ಷಣದೊಂದಿಗೆ ಮೌಲಿಕ ಸಂಸ್ಕಾರ ನೀಡುತ್ತಿದ್ದು, ಮಾದರಿಯಾಗಿ ಮಕ್ಕಳ ಮನೋವಿಕಾಸ ಕಾರ್ಯವನ್ನು ಇಲ್ಲಿನ ಶಿಕ್ಷಕಿಯರು ಮಾಡುತ್ತಿದ್ದಾರೆ ಎಂದು ಹಾವೇರಿಯ ಜಿಲ್ಲಾಸ್ಪತ್ರೆಯ ಸಹಾಯಕ ಪ್ರಾಧ್ಯಾಪಕ, ಚಿಕ್ಕ ಮಕ್ಕಳ ತಜ್ಞರಾದ ಡಾ. ನವೀನ ಬಿ.ಸಂಗೂರಮಠ ಹೇಳಿದರು.

ಅವರು ನಗರದ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಬನಪ್ಪ ಸಂಕಪ್ಪ ಸಂಕಣ್ಣವರ ಸಭಾಭವನದಲ್ಲಿ ಮಂಗಳಾ ಎಜ್ಯುಕೇಶನ್ ಟ್ರಸ್ಟಿನ ಅಡಿಯಲ್ಲಿನ ಬಚಪನ್ ಪ್ಲೇಸ್ಕೂಲ್‌ನ ಪ್ರಥಮ ವಾರ್ಷಿಕ ಸ್ನೇಹ ಸಮ್ಮೇಳನ ಉದ್ಘಾಟಿಸಿ ಮಾತನಾಡಿದರು.

ಪೋಷಕರು ಮಕ್ಕಳಿಗೆ ಮೊಬೈಲ್ ಕೊಟ್ಟು ಅದರ ಗೀಳು ಬೆಳೆಸಬೇಡಿ. ಮಕ್ಕಳಿಗೆ ಕಥೆ, ಅಕಾಶ, ಪರಿಸರ, ಪ್ರಾಣಿ-ಪಕ್ಷಿಗಳನ್ನು ತೋರಿಸುತ್ತ ಧನಾತ್ಮಕ ಮನೋಭಾವ ಬೆಳೆಸಿ ಎಂದರು.

ಟ್ರಸ್ಟಿನ ಅಧ್ಯಕ್ಷರಾದ ಡಾ. ಅಮರೇಶ ಕೆ.ನಾಶಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಟ್ರಸ್ಟಿನ ಕಾರ್ಯದರ್ಶಿ ಡಾ. ಸರ್ವಮಂಳಾ ಎ.ನಾಶಿ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಬೆಂಗಳೂರಿನ ದಂತ ವೈದ್ಯರಾದ ಡಾ. ಶ್ವೇತಾ ಎ.ನಾಶಿ ಕಾರ್ಯಕ್ರಮ ನಿರೂಪಿಸಿದರು. ಶಾಲೆಯ ಸಂಯೋಜಕರಾದ ನೇತ್ರಾವತಿ ವಿನೇಕರ್ ಸ್ವಾಗತಿಸಿ ವಂದಿಸಿದರು.

## 'ಹೆಚ್ಚುತ್ತಿರುವ ನಿರುದ್ಯೋಗ ಬಿಕ್ಕಟ್ಟು': ಮಧ್ಯಪ್ರವೇಶಿಸುವಂತೆ ಕೇಂದ್ರ ಸರ್ಕಾರಿ ಸಂಸ್ಥೆಗಳಿಗೆ ಮನವಿ ಪತ್ರ ಸಲ್ಲಿಸಿದ ಲಕ್ಷದ್ವೀಪ ವಿದ್ಯಾರ್ಥಿಗಳ ಸಂಘ

■ ವಿಜಯಸಾಕ್ಷಿ ಸುದ್ದಿ, ನವದೆಹಲಿ

ಲಕ್ಷದ್ವೀಪ ವಿದ್ಯಾರ್ಥಿ ಸಂಘವು, ಕೇಂದ್ರಾಡಳಿತ ಪ್ರದೇಶದಲ್ಲಿ ಹೆಚ್ಚುತ್ತಿರುವ ನಿರುದ್ಯೋಗ ಬಿಕ್ಕಟ್ಟಿನ ಬಗ್ಗೆ ಮಧ್ಯಪ್ರವೇಶಿಸುವಂತೆ ರಾಷ್ಟ್ರೀಯ ಪರಿಶಿಷ್ಟ ಪಂಗಡಗಳ ಆಯೋಗ ಮತ್ತು ಇತರ ಕೇಂದ್ರ ಸರ್ಕಾರಿ ಸಂಸ್ಥೆಗಳನ್ನು ಒತ್ತಾಯಿಸಿದೆ. ಒಂದು ವರ್ಷಕ್ಕೂ ಹೆಚ್ಚು ಕಾಲ 2,500 ಕ್ಕೂ ಹೆಚ್ಚು ಖಾಯಂ ಸರ್ಕಾರಿ ಹುದ್ದೆಗಳು ಖಾಲಿ ಉಳಿದಿವೆ ಎಂದು ಅವರು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

ಜನವರಿ 26 ರಂದು ಕವರಟ್ಟಿಯಿಂದ ಸಲ್ಲಿಸಲಾದ ಪ್ರಾತಿನಿಧ್ಯದಲ್ಲಿ, ಅರ್ಹ ಸ್ಥಳೀಯ ಅಭ್ಯರ್ಥಿಗಳು ಲಭ್ಯವಿದ್ದರೂ ಲಕ್ಷದ್ವೀಪ ಆಡಳಿತದ 34 ಇಲಾಖೆಗಳಲ್ಲಿ ಮಂಜೂರಾದ ಹುದ್ದೆಗಳನ್ನು



ಭರ್ತಿ ಮಾಡಲಾಗಿಲ್ಲ ಎಂದು ಸಂಘವು ತಿಳಿಸಿದೆ.

ಯಾವುದೇ ಸಂದರ್ಶನಗಳು, ಲಿಖಿತ ಪರೀಕ್ಷೆಗಳು ಅಥವಾ ನೇಮಕಾತಿ ಪ್ರಕ್ರಿಯೆಗಳನ್ನು ಪ್ರಾರಂಭಿಸಲಾಗಿಲ್ಲ, ಇದರಿಂದಾಗಿ ವಿದ್ಯಾವಂತ ಯುವಕರು ದೀರ್ಘಕಾಲದ ಅನಿಶ್ಚಿತತೆಯಲ್ಲಿ ಸಿಲುಕಿದ್ದಾರೆ ಎಂದು ಅವರು ಹೇಳಿದ್ದಾರೆ.

ಪತ್ರದ ಪ್ರತಿಯನ್ನು ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗಕ್ಕೆ ಕಳುಹಿಸಲಾಗಿದೆ. ಮಲಯಾಳಂ ಭಾಷೆಯಲ್ಲಿ ಪತ್ರಿಕಾಗೋಷ್ಠಿಯಲ್ಲಿ, ಗುಂಪು ಅಕ್ಟೋಬರ್ 2025 ರಿಂದ ದ್ವೀಪಗಳಲ್ಲಿನ ನಿರುದ್ಯೋಗದ ಕುರಿತು ಅಭಿಯಾನವನ್ನು ಪ್ರಾರಂಭಿಸಿದೆ ಮತ್ತು ಬಿಕ್ಕಟ್ಟಿನ ವಿಸ್ತಾರವನ್ನು ಅಳೆಯಲು ಡೇಟಾವನ್ನು ಸಂಗ್ರಹಿಸುತ್ತಿದೆ ಎಂದು ಹೇಳಿದರು.

ಬಹಳ ದಿನಗಳಿಂದ ಖಾಲಿ ಇರುವ ಕೆಲವು ಹುದ್ದೆಗಳನ್ನು ರದ್ದುಗೊಳಿಸುವ ಬಗ್ಗೆ ಪರಿಗಣಿಸಲಾಗುತ್ತಿದೆ ಎಂಬ ವರದಿಗಳ ಬಗ್ಗೆ ವಿದ್ಯಾರ್ಥಿ ಸಂಘ ಕಳವಳ ವ್ಯಕ್ತಪಡಿಸಿದ್ದು, ಇಂತಹ ಕ್ರಮಗಳು ಉದ್ಯೋಗಾಕಾಂಕ್ಷಿಗಳು ಮತ್ತು ಅವರ ಕುಟುಂಬಗಳಲ್ಲಿ ಆತಂಕವನ್ನು ಹೆಚ್ಚಿಸಿವೆ ಎಂದು ಎಚ್ಚರಿಸಿದೆ.

2023-24 ರ ಆವರ್ತಕ ಕಾರ್ಮಿಕ ಪಡೆ ಸಮೀಕ್ಷೆ (ಕಐಈಖ) ಯ ಅಧಿಕೃತ ಡೇಟಾವನ್ನು ಉಲ್ಲೇಖಿಸಿ, ಸಂಘವು ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಹೋಲಿಸಿದರೆ ಲಕ್ಷದ್ವೀಪವು ಅತಿ ಹೆಚ್ಚು ನಿರುದ್ಯೋಗ ದರವನ್ನು ಹೊಂದಿದೆ ಎಂದು ಹೇಳಿದೆ.

## ಕಾಯಕ ಶರಣರ ಜಯಂತಿಯ ಪೂರ್ವ ಸಿದ್ಧತಾ ಸಭೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕಾಯಕ ಶರಣರ ಜಯಂತಿಯನ್ನು ಫೆಬ್ರವರಿ 10ರಂದು ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ವ್ಯವಸ್ಥಿತವಾಗಿ ಹಾಗೂ ಅರ್ಥಪೂರ್ಣವಾಗಿ ಆಚರಿಸಲು ಕ್ರಮ ವಹಿಸಬೇಕೆಂದು ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಕಾಯಕ ಶರಣರ ಜಯಂತಿ ಕುರಿತು ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ತಾಲೂಕು ಮಟ್ಟದಲ್ಲಿಯೂ ಸಹ ಕಾಯಕ ಶರಣರ ಜಯಂತಿಯನ್ನು ವ್ಯವಸ್ಥಿತವಾಗಿ ಆಚರಿಸಲು ಕ್ರಮ ವಹಿಸಬೇಕು. ಎಸ್‌ಎಸ್‌ಎಲ್‌ಸಿ,



ಪಿಯುಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸುವ ಕಾರ್ಯಕ್ರಮವಿದೆ. ಶಿಷ್ಟಾಚಾರದನ್ವಯ ಆಮಂತ್ರಣ ಪತ್ರಿಕೆ ಮುದ್ರಣಕ್ಕೆ ಕ್ರಮ ವಹಿಸಬೇಕು. ಕಾಯಕ ಶರಣರ ಕುರಿತು ಅಧ್ಯಯನ ಮಾಡಿದವರಿಂದ ಉಪನ್ಯಾಸ ಕಾರ್ಯಕ್ರಮ ಜರುಗಲಿದೆ. ಒಟ್ಟಾರೆಯಾಗಿ ಕಾಯಕ ಶರಣರ ಜಯಂತಿಯನ್ನು ಅಚ್ಚುಕಟ್ಟಾಗಿ ಆಚರಿಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಎಸ್.ಎನ್. ಬಳ್ಳಾರಿ, ಡಿ.ಜಿ. ಜೋಗಣ್ಣವರ, ರಮೇಶ ಕೊಳೂರ, ಸಮಾಜದ ಹಿರಿಯರು, ಪ್ರಮುಖರು, ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ. ಮಸನಾಯಕ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ ಸ್ವಾಗತಿಸಿ ವಂದಿಸಿದರು.

## ಎಸ್‌ಎಸ್‌ಎಲ್‌ಸಿ ಫಲಿತಾಂಶಕ್ಕೆ ಮಾದರಿ ಪ್ರಯೋಗ:
# ರಾತ್ರಿ 7ರಿಂದ 9ರವರೆಗೆ ಮೊಬೈಲ್-ಟಿವಿ ಬಂದ್!

■ ವಿಜಯಸಾಕ್ಷಿ ಸುದ್ದಿ, ಗದಗ/ಹಾವೇರಿ

ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ತರುವ ನಿಟ್ಟಿನಲ್ಲಿ ಹಾವೇರಿ ಹಾಗೂ ಗದಗ ತಾಲ್ಲೂಕಿನಲ್ಲಿ ಶಿಕ್ಷಣ ಇಲಾಖೆ ಹಾಗೂ ತಾಲ್ಲೂಕು ಪಂಚಾಯತ್ ವಿನೂತನ ಪ್ರಯತ್ನಕ್ಕೆ ಕೈಹಾಕಿವೆ. ಹಾವೇರಿ ತಾಲೂಕಿನ 33 ಗ್ರಾಮ ಪಂಚಾಯತ್ ವ್ಯಾಪ್ತಿಯ ಎಲ್ಲಾ ಹಳ್ಳಿಗಳಲ್ಲಿ ವಿದ್ಯಾರ್ಥಿಗಳ ಓದಿಗೆ ಅಡ್ಡಿಯಾಗುವ ಮೊಬೈಲ್ ಹಾಗೂ ಟಿವಿಗಳನ್ನು ರಾತ್ರಿ 7ರಿಂದ 9ರವರೆಗೆ ಬಂದ್ ಮಾಡುವಂತೆ ಗ್ರಾಮ ಪಂಚಾಯತ್ ಸಿಬ್ಬಂದಿ ಡಂಗೂರ ಸಾರುತ್ತಿದ್ದಾರೆ.

ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ಶಿಕ್ಷಣ ಇಲಾಖೆ ಹಾಗೂ ತಾಪಂ ಈ ವಿಶೇಷ ಕ್ರಮ ಜಾರಿಗೆ ತಂದಿವೆ. ಮಕ್ಕಳಿಗೆ ಓದುವ ವಾತಾವರಣ ಸೃಷ್ಟಿಸುವ ಉದ್ದೇಶದಿಂದ ಪಾಲಕರು ಸಹಕರಿಸಬೇಕು ಎಂದು ಮನವಿ ಮಾಡುವಂತೆ ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಪರಮೇಶ ಹುಬ್ಬಳ್ಳಿ ಅವರು ಎಲ್ಲಾ ಪಿಡಿಓಗಳಿಗೆ ಸೂಚನೆ ನೀಡಿದ್ದಾರೆ. ಹಾವೇರಿ ತಾಲೂಕಿನ ಪ್ರತಿ ಹಳ್ಳಿಯಲ್ಲೂ ಗ್ರಾಪಂ ಸಿಬ್ಬಂದಿ ಡಂಗೂರ ಸಾರುವ ಮೂಲಕ ಸಾರ್ವಜನಿಕರಿಗೆ ಮಾಹಿತಿ ನೀಡುತ್ತಿದ್ದು, ಈ ಕ್ರಮಕ್ಕೆ ವ್ಯಾಪಕ ಸ್ಪಂದನೆ ವ್ಯಕ್ತವಾಗಿದೆ. 2024-25ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಹಾವೇರಿ ತಾಲೂಕು ರಾಜ್ಯಕ್ಕೆ 13ನೇ ಸ್ಥಾನ ಪಡೆದಿದ್ದ ಹಿನ್ನೆಲೆಯಲ್ಲಿ, ಈ ಬಾರಿ ಇನ್ನೂ ಉತ್ತಮ ಸಾಧನೆ ಮಾಡುವ ಗುರಿ ಹೊಂದಲಾಗಿದೆ. ಇನ್ನೂ ಗದಗ ಜಿಲ್ಲೆಯಲ್ಲಿ ಕೂಡ ಈ ಆದೇಶ ಜಾರಿಯಾಗಿದ್ದು, ಎಲ್ಲಾ ಗ್ರಾಮಗಳಲ್ಲಿ ಡಂಗೂರ ಸಾರುವಂತೆ ಸುತ್ತೋಲೆ ಹೊರಡಿಸಲಾಗಿದೆ.

ಶಿಕ್ಷಣ ಇಲಾಖೆ ಹಾಗೂ ತಾಪಂನ ಈ ವಿನೂತನ ಪ್ರಯತ್ನಕ್ಕೆ ಹಾವೇರಿ ಹಾಗೂ ಗದಗ ತಾಲ್ಲೂಕಿನಾದ್ಯಂತ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದ್ದು, ಪಾಲಕರು ಹಾಗೂ ಶಿಕ್ಷಕರು ಸಹ ಈ ಕ್ರಮವನ್ನು ಸ್ವಾಗತಿಸಿದ್ದಾರೆ.

## ಕಲಾ ವಿಕಾಸ ಪರಿಷತ್ ಹಮ್ಮಿಕೊಂಡಿದ್ದ ಅಮರಸ್ವರ ಸಮಾರೋಹ ಕಾರ್ಯಕ್ರಮದಲ್ಲಿ ರವಿ ಗುಂಜೀಕರ
# ಸಂಗೀತ ಭಗವಂತನ ಆರಾಧನೆಯ ಮಾರ್ಗ

■ ವಿಜಯಸಾಕ್ಷಿ ಸುದ್ದಿ, ಗದಗ




ಗದುಗಿಗೆ ಸಂಗೀತದ ಗದ್ದಿಗೆಯ ಗೌರವ ತಂದುಕೊಟ್ಟವರು ಗಾನಯೋಗಿ ಪಂ. ಪಂಚಾಕ್ಷರಿ ಗವಾಯಿಗಳವರು. ಸಂಗೀತದ ಮೂಲಕ ಅಂಧ-ಅನಾಥರು ಸ್ವಾಭಿಮಾನದಿಂದ ಬದುಕು ಕಟ್ಟಿಕೊಳ್ಳುವ ಆತ್ಮವಿಶ್ವಾಸ ತುಂಬಿದವರು. ಸಂಗೀತ ಮನರಂಜನೆಯ ಮಾಧ್ಯಮವಾಗಿರದೆ, ಆತ್ಮಜ್ಞಾನದ ಮಾರ್ಗವೂ ಆಗಿದೆ. ಸಂಗೀತಕ್ಕೆ ಮನಸ್ಸನ್ನು ಶಾಂತವಾಗಿಡುವ ಶಕ್ತಿಯಿದೆ. ಸಂಗೀತ ಭಗವಂತನ ಆರಾಧನೆಯ ಮಾರ್ಗವೂ ಹೌದು ಎಂದು ರಾಜ್ಯ ಸರಕಾರಿ ನೌಕರರ ಸಂಘದ ನಿಕಟಪೂರ್ವ ರಾಜ್ಯ ಉಪಾಧ್ಯಕ್ಷ ಮತ್ತು ಕಲಾ ವಿಕಾಸ ಪರಿಷತ್‌ನ ಸಂಸ್ಥಾಪಕ ಅಧ್ಯಕ್ಷ ರವಿ ಗುಂಜೀಕರ ಹೇಳಿದರು.

ನಗರದ ಮುಂಡರಗಿ ರಸ್ತೆಯಲ್ಲಿ ಭಾರತೀಯ ಶಿಕ್ಷಣ ಸಂಸ್ಥೆಯ ಚಿಕ್ಕಟ್ಟಿ ಸಭಾ ಭವನದಲ್ಲಿ ಉತ್ತರಕರ್ನಾಟಕ ಕಲಾವಿದರ ಹಾಗೂ ಕಲಾ ಪೋಷಕರ ಸಂಘಟನೆ ಕಲಾ ವಿಕಾಸ ಪರಿಷತ್ ಹಮ್ಮಿಕೊಂಡಿದ್ದ ಗಾನಯೋಗಿ ಪಂಚಾಕ್ಷರಿ ಗವಾಯಿಗಳವರ 134ನೇ ಜಯಂತಿ, ಅಮರಸ್ವರ ಸಮಾರೋಹ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಭಾರತೀಯ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಪ್ರೊ. ಎಸ್.ವಾಯ್. ಚಿಕ್ಕಟ್ಟಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಕಲಾ ವಿಕಾಸ ಪರಿಷತ್ ನಮ್ಮ ಶಾಲೆಯಲ್ಲಿ ಸುಮಾರು 20 ವರ್ಷಗಳಿಂದ ಪಂಚಾಕ್ಷರಿ ಗವಾಯಿಗಳವರ ಜಯಂತಿಯನ್ನು ಆಚರಿಸುತ್ತಾ ಬಂದಿದೆ. ಇದು ಬಯಸದೇ ಬಂದ ಭಾಗ್ಯವೆಂದು ಹೇಳಿದರು.

ವೀರೇಶ್ವರ ಪುಣ್ಯಾಶ್ರಮದ ಕುಮಾರ ಹಿರೇಮಠ ಗುತ್ತರಗಿ ಶಾಸ್ತ್ರೀಯ ಸಂಗೀತ, ಧಾರವಾಡದ ಆಕಾಶವಾಣಿ/ದೂರದರ್ಶನ ಕಲಾವಿದೆ, ಕಲಾ ವಿಕಾಸ ಪರಿಷತ್ ರಾಜ್ಯ ಸಂಘಟನಾ ಕಾರ್ಯದರ್ಶಿಯೂ ಆಗಿರುವ ಡಾ. ಸುಮಾ ಬಸವರಾಜ ವಚನ ಸಂಗೀತ, ಕಲಾ ವಿಕಾಸ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ, ಹಾವೇರಿಯ ಮಮತಾ ನಂದಿಹಳ್ಳಿ ಭಕ್ತಿ ಸಂಗೀತ ನಡೆಸಿಕೊಟ್ಟರು.

ಶ್ರೀಕಾಂತ ಗಂಗಾವತಿ ತಬಲಾ, ಹಣಮಂತ ಹಾರ್ಮೋನಿಯಂ ಸಾಥ್ ನೀಡಿದರು. ಬೆಟಗೇರಿಯ ಉದಯೋನ್ಮುಖ ಕಲಾವಿದೆ ತನಿಷಾ ಸತೀಶಕುಮಾರ ವಜ್ರೇಶ್ವರಿ ಭರತನಾಟ್ಯ ಕಾರ್ಯಕ್ರಮ ನಡೆಸಿಕೊಟ್ಟರು. ರೇಖಾ ಬಾಳಿಹಳ್ಳಿಮಠ ಪ್ರಾರ್ಥಿಸಿದರು. ಗಣೇಶ ಬಡ್ನಿ ಸ್ವಾಗತಿಸಿದರು. ಕನ್ನಡ ಪ್ರಾಧ್ಯಾಪಕ, ಸಾಹಿತಿ ಶ್ರೀಶೈಲ ಬಡಿಗೇರ ಕಾರ್ಯಕ್ರಮ ನಿರೂಪಿಸಿದರು. ಶಂಕರ ವಂದಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ, ನಿವೃತ್ತ ಉಪನ್ಯಾಸಕ ಪ್ರೊ. ಅನ್ನದಾನಿ ಹಿರೇಮಠ, ಸುರೇಶ ಅಂಗಡಿ, ಪ್ರಾಚಾರ್ಯ ಬಸವರಾಜ ಗಿರಿತಮ್ಮಣ್ಣವರ, ಸತೀಶ ವಜ್ರೇಶ್ವರಿ, ಪ್ರಾಚಾರ್ಯ ಡಾ. ಬಿಪಿನ್ ಚಿಕ್ಕಟ್ಟಿ, ಉಪ ಪ್ರಾಚಾರ್ಯರಾದ ಶೋಭಾ ಸ್ಥಾವರಮಠ, ಅಧ್ಯಾಪಕಿ ರಿಯಾನಾ ಮುಲ್ಲಾ ಮೊದಲಾದವರು ಉಪಸ್ಥಿತರಿದ್ದರು.

ಕಲಾ ವಿಕಾಸ ಪರಿಷತ್ತಿನ ಅಧ್ಯಕ್ಷ, ಸಿ.ಕೆ.ಹೆಚ್. ಶಾಸ್ತ್ರೀ(ಕಡಣಿ) ಪೂಜ್ಯ ಪಂಚಾಕ್ಷರಿ ಗವಾಯಿಗಳವರಿಗೆ ನುಡಿನಮನ ಸಲ್ಲಿಸಿ, ಪರಿಷತ್ ನಡೆದುಬಂದ ದಾರಿಯನ್ನು ವಿವರಿಸಿ, ರಜ-ತ ಸಂಭ್ರಮಾಚರಣೆ ಸಮಾರೋಪ ಸಮಾರಂಭವನ್ನು ಐತಿಹಾಸಿಕವಾಗಿ ಹಮ್ಮಿಕೊಳ್ಳಲು ನಿರ್ಧರಿಸಿದ್ದು, ಅವಳಿ ನಗರದ ಕಲಾಸಕ್ತರು ಉದಾರ ಸಹಾಯ-ಸಹಕಾರ ನೀಡಲು ವಿನಂತಿಸಿಕೊಂಡರು.

# ನಿಧಿ ಹಿಂತಿರುಗಿಸಿದ ಪ್ರಾಮಾಣಿಕತೆಗೆ ಶಿಕ್ಷೆಯೇ?
# ಪತ್ರದ ಬಹುಮಾನ, ಖಾತೆಗೆ ಬಂದಿಲ್ಲ ಹಣ!

■ ವಿಜಯಸಾಕ್ಷಿ ಸುದ್ದಿ, ಗದಗ

ನಿಧಿ ಹಿಂತಿರುಗಿಸಿ ಪ್ರಾಮಾಣಿಕತೆ ಮೆರೆದಿದ್ದ ಪ್ರಜ್ವಲ್ ರಿತ್ತಿ ಕುಟುಂಬಕ್ಕೆ ಸರ್ಕಾರದಿಂದ ಭಾರೀ ಅನ್ಯಾಯವಾಗುತ್ತಿದೆ ಎಂಬ ಆರೋಪಗಳು ಕೇಳಿ ಬಂದಿವೆ. ಗಣರಾಜ್ಯೋತ್ಸವದಂದು ಐದು ಲಕ್ಷ ರೂ. ಬಹುಮಾನ ಘೋಷಣೆ ಮಾಡಿ ಸರ್ಕಾರ ಬಿಲ್ಡಪ್ ಪಡೆದಿದ್ದರೂ, 10 ದಿನಗಳು ಕಳೆದರೂ ಹಣ ಕುಟುಂಬದ ಬ್ಯಾಂಕ್ ಖಾತೆಗೆ ಜಮಾ ಆಗಿಲ್ಲ.

ಗಣರಾಜ್ಯೋತ್ಸವದಂದು ಪ್ರಜ್ವಲ್ ರಿತ್ತಿ ಕುಟುಂಬಕ್ಕೆ ಐದು ಲಕ್ಷ ರೂ. ಮಂಜೂರು ಮಾಡಿ ಆದೇಶ ಹೊರಡಿಸಲಾಗಿತ್ತು. ಆದರೆ ಈ ಘೋಷಣೆ ಕೇವಲ ಪತ್ರದಲ್ಲೇ ಉಳಿದಿದ್ದು, ವಾಸ್ತವದಲ್ಲಿ ಹಣ ಇದುವರೆಗೂ ಕುಟುಂಬದ ಕೈ ಸೇರಿಲ್ಲ ಎಂಬ ಅಸಮಾಧಾನ ವ್ಯಕ್ತವಾಗಿದೆ.

ಖಾತೆಗೆ ಹಣ ಜಮಾ ಆಗಿದೆಯೇ ಎಂಬುದನ್ನು ತಿಳಿಯಲು ಕುಟುಂಬಸ್ಥರು ಪ್ರತಿದಿನ ಬ್ಯಾಂಕ್‌ಗೆ ಅಲೆದಾಡುತ್ತಿದ್ದು, ಅಲೆದಾಡಿ ಅಲೆದಾಡಿ ಸುಸ್ತಾಗಿದ್ದಾರೆ.

ಮನೆ ಕಟ್ಟಿಕೊಳ್ಳಲು ಹಣಕ್ಕಾಗಿ ಬಕಪಕ್ಷಿಯಂತೆ ಕಾಯುವ ಪರಿಸ್ಥಿತಿಗೆ ಕುಟುಂಬ ಬಂದು ತಲುಪಿದೆ. ಇನ್ನೊಂದೆಡೆ, ಕುಟುಂಬಕ್ಕೆ ನೀಡುವುದಾಗಿ ಹೇಳಿರುವ ಸೈಟ್ ಕುರಿತೂ ಗೊಂದಲ ಮುಂದುವರೆದಿದೆ. ಪಂಚಾಯತಿಯಿಂದ ಸೈಟ್ ನೀಡಲಾಗಿದೆ ಎನ್ನಲಾಗಿದ್ದರೂ, ಪ್ಲಾಟ್ ನಂಬರ್ ಯಾವುದು ಎಂಬುದನ್ನು ಇದುವರೆಗೂ ತಿಳಿಸಿಲ್ಲ. ಯಾವ ಸೈಟ್ ಕೊಡಲಾಗುತ್ತದೆ ಎಂಬುದೇ ಕುಟುಂಬಕ್ಕೆ ಸ್ಪಷ್ಟವಾಗಿಲ್ಲ.

ನಿಧಿ ಸಿಕ್ಕ ಮೂರೇ ತಾಸಿನಲ್ಲಿ ಇಡೀ ಜಿಲ್ಲಾಡಳಿತ ಲಕ್ಕುಂಡಿಗೆ ದೌಡಾಯಿಸಿದ್ದರೂ, ತಿಂಗಳು ಕಳೆದರೂ ಮಾತು ಕೊಟ್ಟಂತೆ ನಡೆದುಕೊಳ್ಳದಿರುವುದು ಸರ್ಕಾರದ ನೈತಿಕತೆಯ ಮೇಲೆಯೇ ಪ್ರಶ್ನಾರ್ಥಕ ಚಿಹ್ನೆ ಮೂಡಿಸಿದೆ.

ಪ್ರಾಮಾಣಿಕತೆಗೆ ಗೌರವ ಎನ್ನುವುದು ಕೇವಲ ಘೋಷಣೆಯಲ್ಲೇ ಉಳಿದಿತೇ ಎಂಬ ಪ್ರಶ್ನೆ ಇದೀಗ ಸಾರ್ವಜನಿಕ ವಲಯದಲ್ಲಿ ಎದ್ದಿದೆ.



# ಯೋಗ ಸರ್ಟಿಫಿಕೇಟ್ ಕೋರ್ಸ್‌ನಲ್ಲಿ ಸಾಧನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ವಿಶ್ವವಿದ್ಯಾಲಯ ಧಾರವಾಡ ಇವರು ಅಗಸ್ಟ್-2025ರಲ್ಲಿ ನಡೆಸಿದ ಸರ್ಟಿಫಿಕೇಟ್ ಕೋರ್ಸ್ ಇನ್ ಯೋಗ ಸ್ಟಡೀಸ್ (2024-25) ಕೋರ್ಸ್‌ನ ಪರೀಕ್ಷಾ ಫಲಿತಾಂಶ ಪ್ರಕಟವಾಗಿದ್ದು, ಪರೀಕ್ಷೆಯಲ್ಲಿ ಎಸ್.ವಾಂಟನ್.ಬಿ.ಎಂ.ಎಸ್ ಯೋಗಪಾಠಶಾಲೆಯ ಬಸವ ಯೋಗ ಮಹಾವಿದ್ಯಾಲಯ ವಿದ್ಯಾರ್ಥಿಗಳು ಉತ್ತಮ ಫಲಿತಾಂಶ ದಾಖಲಿಸಿದ್ದಾರೆ.

ಬಸವ ಯೋಗ ಮಹಾವಿದ್ಯಾಲಯದ ಒಟ್ಟು 30 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು, 29 ವಿದ್ಯಾರ್ಥಿಗಳು ವಿಶೇಷ ಉನ್ನತ ಶ್ರೇಣಿಯಲ್ಲಿ ತೇರ್ಗಡೆ-ಯಾಗಿದ್ದಾರೆ. ಅವರಲ್ಲಿ ಐಶ್ವರ್ಯ ಎನ್. ಮುದ್ದಿಕೋಲ-ಶೇ. 88, ರೋಹನ್ ಪಿ.ಮಳ್ಳೊಳ್ಳಿ- ಶೇ. 87.8, ಯಲ್ಲಪ್ಪ ಎಸ್.ಕನಾಜ-ಶೇ. 87.2 ಅಂಕಗಳನ್ನು ಪಡೆದು ಬಸವ ಯೋಗ ಮಹಾವಿದ್ಯಾಲಯದ ಘನತೆಯನ್ನು ಹೆಚ್ಚಿಸಿದ್ದಾರೆ.

ಯೋಗ ಸರ್ಟಿಫಿಕೇಟ್ ಕೋರ್ಸ್ ಪರೀಕ್ಷೆಯಲ್ಲಿ ಉತ್ತೀರ್ಣರಾದ ಮತ್ತು ಹೆಚ್ಚಿನ ಅಂಕ ಗಳಿಸಿ ಮಹಾವಿದ್ಯಾಲಯದ ಘನತೆ ಹೆಚ್ಚಿಸಿದ ವಿದ್ಯಾರ್ಥಿಗಳಿಗೆ ಮತ್ತು ಪ್ರೋತ್ಸಾಹಿಸಿದ ಸಿಬ್ಬಂದಿ ವರ್ಗಕ್ಕೆ ಬಸವ ಯೋಗ ಮಹಾವಿದ್ಯಾಲಯದ ಅಧ್ಯಕ್ಷರಾದ ಪೂಜ್ಯಶ್ರೀ ಜಗದ್ಗುರು ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳು, ಚೇರಮನ್ ಪ್ರೊ. ಎಸ್.ವಿ. ಸಂಕನೂರ, ಆಡಳಿತಾಧಿಕಾರಿ ಪ್ರೊ. ಎಸ್.ಎಸ್. ಪಟ್ಟಣಶೆಟ್ಟಿ, ಪ್ರಾಚಾರ್ಯ ಕೆ.ಎಸ್. ಪಲ್ಲೇದ, ಹಳೆಯ ವಿದ್ಯಾರ್ಥಿ ಸಂಘದ ಅಧ್ಯಕ್ಷ ಡಾ. ಆಯ್.ಬಿ. ಕೊಟ್ಟೂರಶೆಟ್ಟಿ, ಪ್ರಾಚಾರ್ಯರು, ಆರ್.ಜಿ.ಎಸ್. ಎಸ್ ಆಯುರ್ವೇದಿಕ್ ಮೆಡಿಕಲ್ ಕಾಲೇಜು ರೋಣ, ಸ್ಥಾನಿಕ ಆಡಳಿತ ಮಂಡಳಿ ಸದಸ್ಯ ಡಾ. ಎಂ.ವ್ಹಿ. ಐಹೊಳ್ಳಿ ಮುಂತಾದವರು ಅಭಿನಂದಿಸಿದ್ದಾರೆ.

# ಗ್ರಾಮ ಒನ್ ಕೇಂದ್ರಗಳಿಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಖಾಲಿ ಇರುವ ಶಿರಹಟ್ಟಿ ತಾಲೂಕಿನ ಮಜ್ಜೂರ, ರೋಣ ತಾಲೂಕಿನ ಹಿರೇಹಾಳ ಗ್ರಾಮ ಪಂಚಾಯಿತಿಗಳ ಗ್ರಾಮ ಒನ್ ಕೇಂದ್ರಗಳಿಗೆ ಆನ್ ಲೈನ್ ನಲ್ಲಿ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಫೆಬ್ರವರಿ 15 ರೊಳಗಾಗಿ ಅರ್ಜಿಗಳನ್ನು https://www.karnatakaone.gov.in/public/GramOneFranchiseeTerm ನಲ್ಲಿ ಆನ್ ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು ಎಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಣಿಪುರದಲ್ಲಿ ಹೊಸ ಸರ್ಕಾರ : ಮೈತೇಯಿ ಸಮುದಾಯದ ವೈ. ಖೇಮ್ಚಂದ್
## ನೂತನ ಸಿಎಂ, ಕುಕಿ-ನಾಗಾ ಸಮುದಾಯಗಳಿಗೆ ಡಿಸಿಎಂ ಹುದ್ದೆ

■ ವಿಜಯಸಾಕ್ಷಿ ಸುದ್ದಿ, ಮಣಿಪುರದ

ಸುಮಾರು ಒಂದು ವರ್ಷದಿಂದ ರಾಷ್ಟ್ರಪತಿ ಆಳ್ವಿಕೆಯಲ್ಲಿರುವ ಮಣಿಪುರದಲ್ಲಿ ಹೊಸ ಸರ್ಕಾರ ರಚನೆಗೆ ಬಿಜೆಪಿ ಸಿದ್ಧತೆ ನಡೆಸಿದೆ. ಶಾಸಕಾಂಗ ಪಕ್ಷದ ನಾಯಕರಾಗಿ ಮಾಜಿ ಸಚಿವ ಯುಮ್ನಮ್ ಖೇಮ್ಚಂದ್ ಸಿಂಗ್ ಅವರನ್ನು ಮಂಗಳವಾರ (ಜ.3) ಆಯ್ಕೆ ಮಾಡಿದೆ.

ಕುಕಿ ಝೋ ಮತ್ತು ಮೈತೇಯಿ ಗುಂಪುಗಳ ನಡುವಿನ ದೀರ್ಘಕಾಲ ಜನಾಂಗೀಯ ಸಂಘರ್ಷದ ಬಳಿಕ, ಫೆಬ್ರವರಿ 9,2025ರಂದು ಮಣಿಪುರದ ಮುಖ್ಯಮಂತ್ರಿ ಎನ್. ಬೀರೇನ್ ಸಿಂಗ್ ತನ್ನ ಸ್ಥಾನಕ್ಕೆ ರಾಜೀನಾಮೆ ನೀಡಿದರು. ಫೆ.13ರಂದು ಕೇಂದ್ರ ಸರ್ಕಾರ ರಾಜ್ಯದಲ್ಲಿ ರಾಷ್ಟ್ರಪತಿ ಆಳ್ವಿಕೆ ಹೇರಿತು.

ಮಂಗಳವಾರ ದೆಹಲಿಯಲ್ಲಿ ನಡೆದ ಸಭೆಯಲ್ಲಿ ಖೇಮ್ಚಂದ್ ಅವರನ್ನು ಶಾಸಕಾಂಗ ಪಕ್ಷದ ನಾಯಕರಾಗಿ ಆಯ್ಕೆ ಮಾಡಲಾಗಿದೆ.

# ಸರ್ವಮಂಗಳ ನಿಧನ; ನೇತ್ರದಾನ



■ ವಿಜಯಸಾಕ್ಷಿ ಸುದ್ದಿ, ಗದಗ

ಮಂಗಳವಾರ ನಿಧನರಾದ ಗದಗ ವೀರೇಶ್ವರ ನಗರದ ನಿವಾಸಿ ಸರ್ವಮಂಗಳ ವ್ಹಿ.ವೀರಲಿಂಗಯ್ಯನಮಠ (78) ಅವರ ನೇತ್ರಗಳನ್ನು ಕುಟುಂಬದ ಸಮ್ಮತಿಯೊಂದಿಗೆ ನೇತ್ರದಾನ ಮಾಡಲಾಯಿತು.

ಗದಗ-ಬೆಟಗೇರಿ ಲಯನ್ಸ್ ಕ್ಲಬ್‌ನ ಪದಾಧಿಕಾರಿಗಳ ಪ್ರೇರಣೆಯಿಂದಾಗಿ, ಹುಬ್ಬಳ್ಳಿಯ ನೇತ್ರಾಲಯ ಆಸ್ಪತ್ರೆಯ ಸಹಕಾರದೊಂದಿಗೆ ನೇತ್ರದಾನ ಪ್ರಕ್ರಿಯೆ ಜರುಗಿತು. ರಕ್ತದಾನ, ನೇತ್ರದಾನ, ದೇಹದಾನ ಮಾಡುವ ಮೂಲಕ ಇತರರಿಗೆ ನೆರವಾಗಿ ಮಾದರಿಯಾಗಬೇಕೆಂಬ ಲಯನ್ಸ್ ಕ್ಲಬ್‌ನ ಮನವಿಗೆ ಉತ್ತಮ ಪ್ರತಿಕ್ರಿಯೆ ದೊರೆಯುತ್ತಿದೆ ಎಂದು ಕ್ಲಬ್‌ನ ಕಾರ್ಯದರ್ಶಿ ರಾಜಣ್ಣ ಮಲ್ಲಾಡದ ಪ್ರತಿಕ್ರಿಯಿಸಿದ್ದಾರೆ.

ಈ ಸಂದರ್ಭದಲ್ಲಿ ಕ್ಲಬ್ ಅಧ್ಯಕ್ಷ ರಾಜು ವೇರ್ಣೆಕರ, ಕೋಶಾಧ್ಯಕ್ಷ ರೇಣುಕಪ್ರಸಾದ ಹಿರೇಮಠ, ರಮೇಶ ಶಿಗ್ಲಿ, ರಾಹುಲ್ ಅರಳಿ, ವೀರೇಶ ಪಟ್ಟಣಶೆಟ್ಟಿ, ರತನ್ ದೇಸಾಯಿ, ಅಶ್ವಥ್ ಸುಲಾಖೆ, ಮಂಜುನಾಥ ವೀರಲಿಂಗಯ್ಯನಮಠ ಸೇರಿದಂತೆ ಕ್ಲಬ್‌ನ ಸದಸ್ಯರು, ಕುಟುಂಬಸ್ಥರು ಉಪಸ್ಥಿತರಿದ್ದರು.

# ಕ್ಯಾನ್ಸರ್ ಕುರಿತು ಅರಿವು ಕಾರ್ಯಕ್ರಮ



■ ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಕರ್ನಾಟಕ ಶಿವಶರಣೆ ಹೇಮರೆಡ್ಡಿ ಮಲ್ಲಮ್ಮನ ಮಹಿಳಾ ವಿವಿಧೋದ್ದೇಶಗಳ ಸಂಘದ ಮಾಸಿಕ ಸಭೆಯಲ್ಲಿ ಕ್ಯಾನ್ಸರ್ ಕುರಿತು ತಿಳುವಳಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಸಂಪನ್ಮೂಲ ವ್ಯಕ್ತಿಯಾಗಿ ಪಾಲ್ಗೊಂಡಿದ್ದ ವೀಣಾ ತಿರ್ಲಾಪೂರ್ ಮಾತನಾಡಿ, ಕ್ಯಾನ್ಸರ್ ಎಂಬ ಪದ ಕೇಳಿದಾಗಲೇ ಜನರಲ್ಲಿ ಭಯ ಉಂಟಾಗುತ್ತದೆ. ಆದರೆ ತಿಳುವಳಿಕೆ, ಜಾಗೃತಿ ಮತ್ತು ಸಮಯೋಚಿತ ಚಿಕಿತ್ಸೆ ಇದ್ದರೆ ಕ್ಯಾನ್ಸರ್‌ನ್ನು ಗೆಲ್ಲುವುದು ಸಾಧ್ಯ. ಕ್ಯಾನ್ಸರ್ ಎಂದರೆ ದೇಹದ ಕೋಶಗಳು ನಿಯಂತ್ರಣವಿಲ್ಲದೆ ಬೆಳೆಯುವುದರಿಂದ ಉಂಟಾಗುವ ರೋಗ. ಧೂಮಪಾನ, ಮದ್ಯಪಾನ, ಅಸ್ವಸ್ಥ ಆಹಾರ ಪದ್ಧತಿ, ವ್ಯಾಯಾಮದ ಕೊರತೆ, ಪರಿಸರ ಮಾಲಿನ್ಯವು ಕ್ಯಾನ್ಸರ್‌ಗೆ ಪ್ರಮುಖ ಕಾರಣಗಳಾಗಿವೆ.

ಇಂದಿನ ದಿನಗಳಲ್ಲಿ ಸ್ತನ ಕ್ಯಾನ್ಸರ್, ಗರ್ಭಕೋಶದ ಕ್ಯಾನ್ಸರ್, ಬಾಯಿಯ ಕ್ಯಾನ್ಸರ್ ಮತ್ತು ಶ್ವಾಸಕೋಶ ಕ್ಯಾನ್ಸರ್ ಹೆಚ್ಚು ಕಂಡುಬರುತ್ತಿವೆ.

ಆದರೆ ಸಂತಸದ ವಿಷಯವೆಂದರೆ, ಕ್ಯಾನ್ಸರ್ ಅನ್ನು ಪ್ರಾರಂಭಿಕ ಹಂತದಲ್ಲೇ ಪತ್ತೆ ಹಚ್ಚಿದರೆ ಚಿಕಿತ್ಸೆ ಯಶಸ್ವಿಯಾಗುತ್ತದೆ ಎಂದು ತಿಳಿಸಿದರು.


ಅಧ್ಯಕ್ಷತೆ ವಹಿಸಿದ್ದ ಪ್ರೇಮಾ ಮೇಟಿ ಮಾತನಾಡಿ, ನಿಯಮಿತ ಆರೋಗ್ಯ ತಪಾಸಣೆ, ಸ್ವಯಂ ಪರೀಕ್ಷೆ, ವೈದ್ಯರ ಸಲಹೆ ಮತ್ತು ಆರೋಗ್ಯಕರ ಜೀವನಶೈಲಿಯು ಅತ್ಯಂತ ಅಗತ್ಯ. ಧೂಮಪಾನ ಮತ್ತು ಮದ್ಯಪಾನವನ್ನು ತ್ಯಜಿಸುವುದು, ಸಮತೋಲಿತ ಆಹಾರ ಸೇವಿಸುವುದು, ದಿನನಿತ್ಯ ವ್ಯಾಯಾಮ ಮಾಡುವುದು ಮತ್ತು ಧನಾತ್ಮಕ ಮನೋಭಾವ ಇವುಗಳು ಕ್ಯಾನ್ಸರ್ ತಡೆಯಲು ಸಹಾಯಕವಾಗುತ್ತವೆ ಎಂದು ನುಡಿದರು.

ಉಪಾಧ್ಯಕ್ಷರಾದ ಕಸ್ತೂರಿ ಹಿರೇಗೌಡರ್ ಮಾತನಾಡಿ, ಕ್ಯಾನ್ಸರ್ ರೋಗಿಗಳ ಬಗ್ಗೆ ಸಹಾನುಭೂತಿ ಮತ್ತು ಬೆಂಬಲ ತೋರಿಸುವುದು ನಮ್ಮ ಸಾಮಾಜಿಕ ಹೊಣೆಗಾರಿಕೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮವನ್ನು ಸರೋಜಾ ಪೈಲ್ ನಿರ್ವಹಿಸಿದರು. ಭಾಗ್ಯ ಶಿರೋಳ ವಂದಿಸಿದರು. ಕಾರ್ಯಕ್ರಮದಲ್ಲಿ ನೀಲಾ ಮುದರಡ್ಡಿ, ಸುಮಂಗಲ ರಡ್ಡೆರ್, ಗಿರಿಜಾ ಸುರೇಬಾನ್, ದೊಡ್ಡಮನಿ, ರಾಜೇಶ್ವರಿ ಶಿರೋಳ್, ಸುಮಂಗಲ ಪಾಟೀಲ್ ಮುಂತಾದವರಿದ್ದರು.

## ಹಕ್ಕುಪತ್ರ ವಿತರಣೆ ಪ್ರಕ್ರಿಯೆಯಲ್ಲಿ ನಿರ್ಲಕ್ಷಿಸಿದರೆ ಕಠಿಣ ಕ್ರಮದ ಎಚ್ಚರಿಕೆ
# ಹಕ್ಕುಪತ್ರ ವಿತರಣೆಯನ್ನು ಶೀಘ್ರದಲ್ಲೇ ಪೂರ್ಣಗೊಳಿಸಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ



ತಾಲೂಕಿನ ಛಬ್ಬಿ, ಸೇವಾನಗರ, ಶಿವಾಜಿನಗರ ಮತ್ತು ಹೊಸಳ್ಳಿ ಗ್ರಾಮಗಳಲ್ಲಿ ಹಲವು ವರ್ಷಗಳಿಂದ ವಾಸವಿದ್ದ ಕುಟುಂಬಗಳಿಗೆ ಸರಕಾರ ಕಾನೂನುಬದ್ಧವಾಗಿ ದಾಖಲೆ ನೀಡಲು ಮುಂದಾಗಿದೆ. ಆದರೆ ಇದನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕಾದ ಗ್ರಾಮ ಆಡಳಿತಾಧಿಕಾರಿ, ಕಂದಾಯ ನಿರೀಕ್ಷಕ, ಪಿಡಿಓ ಮತ್ತು ಸರ್ವೆಯರ್ ಹಕ್ಕುಪತ್ರ ವಿತರಣೆ ನಿರ್ಲಕ್ಷಿಸಿ ವಿಳಂಬ ಮಾಡಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ತಹಸೀಲ್ದಾರ ಕೆ. ರಾಘವೇಂದ್ರ ರಾವು ಸಿಬ್ಬಂದಿಗಳಿಗೆ ಎಚ್ಚರಿಕೆ ನೀಡಿದ್ದಾರೆ.

ಶಿರಹಟ್ಟಿ ತಾಲೂಕಿನ ಛಬ್ಬಿ, ಸೇವಾನಗರ, ಶಿವಾಜಿನಗರ ಮತ್ತು ಹೊಸಳ್ಳಿ ಗ್ರಾಮಗಳಲ್ಲಿಯ ಸರಕಾರಿ ಮತ್ತು ಖಾಸಗಿ ಜಾಗೆಯಲ್ಲಿ ಅನಧಿಕೃತವಾಗಿ ವಾಸವಿದ್ದ ಕುಟುಂಬಗಳನ್ನು ಗುರುತಿಸಿ ಅವರಿಗೆ ಕಂದಾಯ ಗ್ರಾಮ/ಉಪಗ್ರಾಮ ಮಾಡುವ ಉದ್ದೇಶದಿಂದ ಕಾನೂನುಬದ್ಧ ಹಕ್ಕುಪತ್ರವನ್ನು ಇ-ಸ್ವತ್ತು ದಾಖಲೆ ಸಮೇತ ಹಕ್ಕುಪತ್ರ ವಿತರಣೆ ಮಾಡುತ್ತಿದೆ. ಇಂತಹ ಸದವಕಾಶವನ್ನು ಸರಕಾರ ಕಲ್ಪಿಸಿದ್ದು, ಇದನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕಾದ ಜವಾಬ್ದಾರಿ ಅಧಿಕಾರಿಗಳ ಮೇಲಿದೆ.

ಶಿರಹಟ್ಟಿ ತಾಲೂಕಿನಲ್ಲಿ ಹಕ್ಕುಪತ್ರ ವಿತರಿಸುವ ಸಲುವಾಗಿ ತಂತ್ರಾಂಶದಲ್ಲಿ ದಾಖಲಿಸಿದ ಸಂಖ್ಯೆ 294 ಇದ್ದು, ವಿಎ ಲಾಗಿನ್‌ನಲ್ಲಿ 50 ಬಾಕಿ ಇದ್ದು, ವಿಷಯ ನಿರ್ವಾಹಕರಲ್ಲಿ 2 ಬಾಕಿ, ತಹಸೀಲ್ದಾರರ ಲಾಗಿನ್‌ನಲ್ಲಿ 28 ಬಾಕಿ, ಅನುಮೋದನೆಯಾಗಿದ್ದು 214, ಇ-ಸ್ವತ್ತು ಐಡಿ ಸಂಖ್ಯೆ: 201, ಡಿ.ಡಿಗೆ ಬಂದಿರುವ ಸಂಖ್ಯೆ-194, ಡಿ.ಡಿ ತೆಗೆದಿರುವ ಸಂಖ್ಯೆ-107 ಹಾಗೂ ನೋಂದಣಿಯಾದ ಸಂಖ್ಯೆ 100 ಇದೆ. ಹೀಗಾಗಿ ಬಾಕಿ ಉಳಿದ ಹಕ್ಕುಪತ್ರ ವಿತರಣೆಯನ್ನು ಶೀಘ್ರದಲ್ಲೇ ಮುಗಿಸಬೇಕೆಂದು ತಹಸೀಲ್ದಾರರು ತಮ್ಮ ಸಿಬ್ಬಂದಿಗಳಿಗೆ ಖಡಕ್ ಎಚ್ಚರಿಕೆ ನೀಡಿದ್ದಾರೆ.

ದೇವರು ವರ ಕೊಟ್ಟರೂ ಪೂಜಾರಿ ಕೊಡಲಿಲ್ಲವೆಂಬ ನಾಣ್ಣುಡಿಯಂತೆ ಸರಕಾರಿ ಹಾಗೂ ಖಾಸಗಿ ಜಾಗೆಗಳಲ್ಲಿ ಹಲವು ವರ್ಷಗಳಿಂದ ವಾಸವಿದ್ದ ಕುಟುಂಬಗಳು ಯಾವುದೇ ದಾಖಲೆಯನ್ನು ಹೊಂದದೇ ಇರುವುದಕ್ಕೆ ಇವರು ಸರಕಾರಿ ಸೌಲಭ್ಯದಿಂದ ವಂಚಿತರಾಗಬಾರದೆನ್ನುವ ಉದ್ದೇಶದಿಂದ ಇಂತಹ ಕುಟುಂಬಗಳನ್ನು ಗುರುತಿಸಿ ಅವರಿಗೆ ಕಾನೂನುಬದ್ಧ ದಾಖಲೆಯನ್ನು ನೀಡುತ್ತಿರುವುದು ಶ್ಲಾಘನೀಯ. ಇಂತಹ ಕಾರ್ಯವನ್ನು ಅನುಷ್ಠಾನಗೊಳಿಸಬೇಕಾದ ಸಂಬಂಧಿಸಿದ ಇಲಾಖೆಯ ಕೆಳ ಹಂತದ ಸಿಬ್ಬಂದಿಗಳು ಗ್ರಾಮ ಮಟ್ಟದಲ್ಲಿ ಈ ಬಗ್ಗೆ ಹೆಚ್ಚು ಜಾಗೃತಿಯನ್ನು ಮೂಡಿಸುವಲ್ಲಿ ವಿಫಲರಾದರೇ, ಬಾಕಿ ಉಳಿದಿದ್ದಕ್ಕೆ ಪ್ರಚಾರದ ಕೊರತೆಯೇ ಅಥವಾ ಸಿಬ್ಬಂದಿಗಳ ನಿರ್ಲಕ್ಷ್ಯವೇ ಎಂಬುದಕ್ಕೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಉತ್ತರಿಸಬೇಕಿದೆ.

ಈ ಕುರಿತು ಪ್ರತಿಕ್ರಿಯಿಸಿದ ತಹಸೀಲ್ದಾರ ಕೆ. ರಾಘವೇಂದ್ರ ರಾವು, ಸರಕಾರಿ/ಖಾಸಗಿ ಜಾಗೆಗಳಲ್ಲಿ ಅನಧಿಕೃತವಾಗಿ ವಾಸವಿದ್ದ ಕುಟುಂಬಗಳಿಗೆ ಕಾನೂನುಬದ್ಧವಾಗಿ ನಿಯಮಾನುಸಾರ ನೋಂದಾಯಿಸಿ ಹಕ್ಕುಪತ್ರ ವಿತರಿಸಲು ಸರಕಾರ ಅವಕಾಶವನ್ನು ಕಲ್ಪಿಸಿದ್ದು, ತಾಲೂಕಿನಲ್ಲಿ 78 ಬಾಕಿ ಇದ್ದು, 27 ತಾಂತ್ರಿಕ ಸಮಸ್ಯೆ ಇದೆ. ಬಾಕಿ ಉಳಿದವುಗಳನ್ನು ಸಂಬಂಧಿಸಿದ ಕುಟುಂಬಗಳ ಮನೆ ಮನೆಗೆ ಗ್ರಾಮ ಆಡಳಿತಾಧಿಕಾರಿ, ಕಂದಾಯ ನಿರೀಕ್ಷಕ, ಪಿಡಿಓ ಮತ್ತು ಸರ್ವೆಯರ್ ಜಂಟಿಯಾಗಿ ತೆರಳಲು ಸೂಚಿಸಲಾಗಿದೆ. ಆದಾಗ್ಯೂ ಈ ಪ್ರಕ್ರಿಯೆಯಲ್ಲಿ ಯಾರಾದರೂ ನಿರ್ಲಕ್ಷ್ಯ ವಹಿಸಿದರೆ, ವಿಳಂಬ ಮಾಡಿದರೆ ಅಂತಹವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದರು.

## ಬಿ.ಇಡಿ ದಾಖಲಾತಿ ಪರಿಶೀಲನೆ, ಪ್ರವೇಶ

■ವಿಜಯಸಾಕ್ಷಿ ಸುದ್ದಿ, ಗದಗ

2025-26ನೇ ಸಾಲಿನ ಬಿ.ಇಡಿ. ದಾಖಲಾತಿ ಸಂಬಂಧ ನಾಲ್ಕನೇಯ ಪಟ್ಟಿಯ ಹಂಚಿಕೆ ಪ್ರಕಾರ ಸೇರ್ಪಡೆಯಾಗಿ ಉಳಿಕೆಯಾಗಿರುವ ಸೀಟುಗಳ ಕಾಲೇಜುವಾರು ಸೀಟು ಮ್ಯಾಟ್ರಿಕ್ಸ್ ನ್ನು : 29/01/2026 ರಂದು https://schooleducation.karnataka.gov.in/ ರಲ್ಲಿ ಪ್ರಕಟಿಸಿ ಕಾಲೇಜುಗಳಿಗೆ ದಾಖಲಾಗದ ಅಭ್ಯರ್ಥಿಗಳು ನಾಲ್ಕನೇಯ ಸುತ್ತಿನ ಸೀಟು ಹಂಚಿಕೆಗಾಗಿ ತಮ್ಮ ಅಭಿಮತವನ್ನು ದಾಖಲಿಸಲು ದಿನಾಂಕ: 31/01/2026ರವರೆಗೆ ಅವಕಾಶ ಕಲ್ಪಿಸಿದ್ದು, karnataka.gov.in/GPSTRHK ವೆಬ್‌ಸೈಟ್ ನಲ್ಲಿ ಬಿಡುಗಡೆಗೊಳಿಸಿದೆ.

ಅಭ್ಯರ್ಥಿಗಳು ಈಗ ಹಂಚಿಕೆಯಾದ ಕಾಲೇಜುಗಳಿಗೆ ಸೇರಬಯಸಿದಲ್ಲಿ ತಮ್ಮ ಯೂಸರ್ ಐಡಿ ಮತ್ತು ಪಾಸ್ ವರ್ಡ್ ನ್ನು ಬಳಸಿ ನಿಗದಿತ ಶುಲ್ಕದ ಚಲನ್ ಅನ್ನು ಮುದ್ರಿಸಿಕೊಂಡು ಭಾರತೀಯ ಸ್ಟೇಟ್ ಬ್ಯಾಂಕ್ ನ ಯಾವುದೇ ಶಾಖೆಯಲ್ಲಿ ಪಾವತಿಸಿ ಅದರ ಮೂಲ ಪ್ರತಿ ಹಾಗೂ ಇತರೆ ಎಲ್ಲಾ ಮೂಲ ದಾಖಲೆಗಳೊಂದಿಗೆ ಸಂಬಂಧಿಸಿದ ಜಿಲ್ಲಾ ನೋಡಲ್ ಕೇಂದ್ರಕ್ಕೆ ಹಾಜರಾಗಿ ಸಲ್ಲಿಸಿ ಫೆಬ್ರುವರಿ 06 ರೊಳಗೆ ದಾಖಲಾತಿ ಪತ್ರವನ್ನು ಪಡೆದುಕೊಳ್ಳುವುದು ಹಾಗೂ ನಿಗದಿತ ದಿನಾಂಕದೊಳಗೆ ಸಂಬಂಧಿಸಿದ ಕಾಲೇಜಿಗೆ ಸೇರ್ಪಡೆಗೊಳ್ಳಲು ಸೂಚಿಸಿದೆ.

ಪಟ್ಟಿಯಲ್ಲಿ ಮೊದಲ ಬಾರಿಗೆ ಹೆಸರು ಸೇರ್ಪಡೆಯಾಗಿ ಸೀಟು ಹಂಚಿಕೆಯಾದ ಅಭ್ಯರ್ಥಿಗಳು ಮಾತ್ರ ಹಂಚಿಕೆಯಾದ ಕಾಲೇಜಿಗೆ ಸೇರ್ಪಡೆಗೊಳ್ಳಲು ಬಯಸದೇ ಇದ್ದಲ್ಲಿ, ಯಾವುದೇ ಶುಲ್ಕವನ್ನು ಪಾವತಿಸದೇ, "Opted for the Next Round' ಎಂದು ಅಭಿಮತವನ್ನು ಇದೇ ಅವಧಿಯಲ್ಲಿ ದಾಖಲಿಸಬೇಕು. ಇಂತಹ ಅಭ್ಯರ್ಥಿಗಳು, ಈ ಪಟ್ಟಿಯಲ್ಲಿ ಆಯ್ಕೆಯಾಗಿ ಗುರುತು ಬಂದು ಸೀಟು ಹಂಚಿಕೆಯಾಗದ ಅಭ್ಯರ್ಥಿಗಳು ಮತ್ತು ಈ ತನಕದ ಪಟ್ಟಿಯಲ್ಲಿ ಹೆಸರು ಬಾರದಿರುವ ಅಭ್ಯರ್ಥಿಗಳಿಗೆ ಮಾತ್ರ ಮುಂದಿನ ಸುತ್ತಿನ ಆಯ್ಕೆಗೆ ಅವಕಾಶವನ್ನು ಕಲ್ಪಿಸಲಾಗುವುದು ಎಂದು ನೋಡಲ್ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ www.schooleducation.kar.nic.in.ಜಾಲತಾಣವನ್ನು ಅಥವಾ ಬಿ ಎಫ್ ಆರವಟಗಿ ನೋಡಲ್ ಅಧಿಕಾರಿಗಳು ಡಯಟ್, ಗದಗ ಅವರನ್ನು ಸಂಪರ್ಕಿಸಬಹುದು.

### ಫೆ.6ರಂದು ಅದ್ದೂರಿಯಾಗಿ ಜರುಗಲಿದೆ ಡಂಬಳದ ಹಜರತ್ ಜಮಾಲಶಾವಲಿ ಶರಣರ ಉರೂಸ್

# ಜನಮಾನಸದ ಭಕ್ತರ ಜಾತ್ರೆ ನಾಳೆ

■ವಿಜಯಸಾಕ್ಷಿ ಸುದ್ದಿ, ಡಂಬಳ

ನೂರಾರು ವರ್ಷಗಳ ಕಾಲ ಗ್ರಾಮದ ತೋಂಟದಾರ್ಯ ಜಾತ್ರಾ ಮಹೋತ್ಸವ ಮುಗಿದ ನಂತರ ಜರುಗುವ ಸೂಫಿ ಸಂತರಾದ ಹಜರತ್ ಜಮಾಲಶಾವಲಿ ಶರಣರ ಗಂಧ ಈ ಬಾರಿ ಫೆ. 5ಕ್ಕೆ ಹಾಗೂ ಉರೂಸ್ ಫೆ. 6ಕ್ಕೆ ಜರುಗಲಿದೆ.

ಫೆ. 5ರಂದು ಗಂಧದ ಮೆರವಣಿಗೆ ರಾತ್ರಿ ಪ್ರಾರಂಭವಾಗಲಿದ್ದು, ರಾಮಣ್ಣ ಗದಗ ಅವರ ಮನೆತನದವರ ಚಕ್ಕಡಿಯಲ್ಲಿ ನಗಾರಿ ಹೊತ್ತ ಎತ್ತುಗಳ ಮೆರವಣಿಗೆ ವಿವಿಧ ಬಡಾವಣೆಗಳಲ್ಲಿ ಸಾಗಿ ದರ್ಗಾಕ್ಕೆ ತಲುಪಲಿದೆ. ಫೆ. 6ರಂದು ಬೆಳಿಗ್ಗೆಯಿಂದ ಸಂಜೆಯವರೆಗೆ ರೈತರು ತಮ್ಮ ಎತ್ತುಗಳನ್ನು ಮೆರವಣಿಗೆ ಮೂಲಕ ದರಗಾದ ಸುತ್ತ ಐದು ಸುತ್ತು ಹಾಕಿ ಸಕ್ಕರಿ ಓದಿಸುತ್ತಾರೆ. ರಾತ್ರಿ ಅನ್ನಸಂತರ್ಪಣೆ, ನಂತರ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯುತ್ತವೆ.

ಹಜರತ್ ಜಮಾಲಶಾವಲಿ ಶರಣರ ಜಾತ್ಯಾತೀತ ಧಾರ್ಮಿಕ ಸಂತರು. ಅಖಂಡ ಮಾನವ ಸಮುದಾಯದ ಹಿತಾಸಕ್ತಿ ಬಗ್ಗೆ, ಕ್ರಿಯಾಶೀಲ ಬದುಕಿನ ಬಗ್ಗೆ, ಧರ್ಮದ ಗಡಿಯನ್ನು ದಾಟಿ ಚಿಂತಿಸಿ, ಲೋಕ ಸಂಚಾರ ಮಾಡಿ ತಾವು ಕಂಡ ಜ್ಞಾನವನ್ನು ಸರಳವಾಗಿ ಪ್ರಸಾರ ಮಾಡಿದ ವಿಶ್ವಧರ್ಮಿಗಳಾಗಿದ್ದರು. ಅವರ ಪವಾಡಗಳು ಇಂದಿಗೂ ಮನೆಮಾತಾಗಿದೆ.

ಗ್ರಾಮದಲ್ಲಿ ಎಲ್ಲ ರೈತಾಪಿ ವರ್ಗ ಉರೂಸ್‌ನಂದು ತಮ್ಮ ಎತ್ತುಗಳನ್ನು ಸಿಂಗರಿಸಿಕೊಂಡು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ದರ್ಗಾದ ಸುತ್ತ ಐದು ಬಾರಿ ಸುತ್ತನ್ನು ಹಾಕಿಸಿ ಸಕ್ಕರೆ ಪೂಜೆಯನ್ನು ಮಾಡಿಸುವ ಮೂಲಕ ಭಕ್ತಿ ಮೆರೆಯುವುದು ಇಲ್ಲಿನ ವಿಶೇಷ.



ಈಗಲೂ ಎತ್ತುಗಳ ಆರೋಗ್ಯದಲ್ಲಿ ಏರುಪೇರಾದರೆ ರೈತರು ಜಮಾಲಶಾವಲಿ ಶರಣರ ದರ್ಗಾಕ್ಕೆ ಬಂದು ಭಕ್ತಿ ಸಮರ್ಪಿಸುತ್ತಾರೆ. ಎತ್ತುಗಳ ಆರೋಗ್ಯದಲ್ಲಿ ಚೇತರಿಕೆಯಾಗುತ್ತದೆ ಎನ್ನುವ ಅಪಾರ ನಂಬಿಕೆ ರೈತರಲ್ಲಿದೆ. ಇದಲ್ಲದೇ ಭಕ್ತರ ಆಶಯಗಳು, ಇಷ್ಟಾರ್ಥಗಳು ಈಡೇರುತ್ತವೆ ಎಂದು ಅನಾದಿಕಾಲದಿಂದಲೂ ನಂಬಿಕೆಯಿದೆ.

ತೋಂಟದಾರ್ಯ ಜಾತ್ರೆ ಮುಗಿದ ಬಳಿಕ ಮಠದ ಈ ಹಿಂದಿನ ಶ್ರೀಗಳಿಂದ ಗಂಧ ಮತ್ತು ಉರೂಸ್ ಆಚರಿಸಲಾಗುತ್ತಿತ್ತು, ಅಲ್ಲದೆ ಉರೂಸ್‌ನ ದಿನ ಜರುಗುವ ಅನ್ನ ಸಂತರ್ಪಣೆಯಂದು ಮೊದಲು ಮಠದಲ್ಲಿರುವ ವೇದಮೂರ್ತಿಗಳಿಗೆ ಪೂಜೆ ಸಲ್ಲಿಸಲಾಗುತ್ತದೆ. ನೂರಾರು ವರ್ಷಗಳಿಂದ ಜಾತ್ರೆ ಮುಗಿದ ಬಳಿಕ ಉರೂಸ್ ಜರುಗುತ್ತಿದ್ದು, ಜನಮಾನಸದ ಭಕ್ತರ ಜಾತ್ರೆಯಾಗಿ ರೂಪುಗೊಂಡಿದೆ.

ಜಮಾಲಶಾವಲಿ ದರ್ಗಾ ಸಮಿತಿಯ ಗೌರವಾಧ್ಯಕ್ಷ ಹನಮಂತಪ್ಪ ಗದಗಿನ, ಅಧ್ಯಕ್ಷ ಅಲ್ಲಿಸಾಬ ಮೂಲಿಮನಿ, ಉಪಾಧ್ಯಕ್ಷ ಶಫೀ ಮೂಲಿಮನಿ, ಇಂತಿಯಾಜ ದಫೇದಾರ, ರಜಾಕಸಾಬ ಉಮ್ಮರಸಾಬ, ಮೋದಿನ ಚಾಂದಖಾನವರ, ಖಾಜಾಹುಸೇನ ಹೊಸಪೇಟಿ, ಬಂದುಸಾಬ ಜಲಾಲನವರ, ಕರೀಂಸಾಬ ಸರಖಾವಾಸ, ಮುರ್ತುಜಾ ಮನಿಯಾರ, ಬುಡ್ನೆಸಾಬ ಅತ್ತಾರ, ಹುಸೇನ ದೊಡ್ಡಮನಿ, ಇಬ್ರಾಹಿಂ ಹೊಸಪೇಟಿ, ಕಾಸಿಂಸಾಬ ದೊಡ್ಡಮನಿ, ಡಿ.ಡಿ. ಸೊರಟೂರ, ಗೌಸುಸಾಬ ಆಲೂರ, ರಾಜು ಹಳ್ಳಿಕೇರಿ, ಅಲ್ಲಾವುದ್ದಿನ ಹೊಂಬಳ, ಬಾಬುಸಾಬ ಸರಕಾವಾಸ, ಇಮಾಮಸಾಬ ಹೊಂಬಳ ಸೇರಿದಂತೆ ಅಪಾರ ಸಂಖ್ಯೆಯ ಭಕ್ತರು ಪಾಲ್ಗೊಳ್ಳಲಿದ್ದಾರೆ.

> ಹಜರತ್ ಜಮಾಲಶಾವಲಿ ಶರಣರು ಜಾತ್ಯಾತೀತ ಧಾರ್ಮಿಕ ಸಂತರು. ಗ್ರಾಮದಲ್ಲಿ ನೆಲೆಸಿ ಧರ್ಮ ಸಮನ್ವಯ ದೃಷ್ಟಿಯಿಂದ ಸಾಮರಸ್ಯ ಮೂಡಿಸಿ, ವಿವಿಧತೆಯಲ್ಲಿ ಏಕತೆಯನ್ನು ಸಾರಿ, ಭಕ್ತರ ಪಾಲಿನ ಆಶಾಕಿರಣವಾಗಿ ಜೀವನೋತ್ಸಾಹ ತುಂಬುತ್ತಿರುವ ಜಮಾಲಶಾವಲಿ ಶರಣರು ಹಾಕಿಕೊಟ್ಟ ಸದ್ವಿಚಾರಗಳು ಸದಾ ಕಾಲ ಇರುತ್ತವೆ.
>
> – ಮಹಮ್ಮದರಫೀಕಸಾಬ ಅಲ್ಲಾವುದ್ದಿನಸಾಬ ಹೊಸಪೇಟಿ.
> ಸಮಾಜ ಸೇವಕರು, ಡಂಬಳ.

## ಮಕ್ಕಳಲ್ಲಿ ಮಾನವೀಯ ಮೌಲ್ಯಗಳನ್ನು ಬಿತ್ತಿ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಶಿಕ್ಷಣ ಸೇವೆಯೊಂದಿಗೆ ಮಕ್ಕಳಲ್ಲಿ ಧರ್ಮ, ಸಂಸ್ಕಾರ, ಮಾನವೀಯ ಮೌಲ್ಯಗಳನ್ನು ಬಿತ್ತುವ ಮೂಲಕ ಮಗುವನ್ನು ಮನುಷ್ಯನ್ನಾಗಿಸಿದಾಗ ಮಾತ್ರ ಶಿಕ್ಷಣದ ಉದ್ದೇಶ ಸಾಫಲ್ಯವಾಗುತ್ತದೆ ಎಂದು ಶ್ರೀ ಫಕೀರ ದಿಂಗಾಲೇಶ್ವರ ಜಗದ್ಗುರುಗಳು ಹೇಳಿದರು.

ಅವರು ಪಟ್ಟಣದ ತಾಯಿ ಪಾರ್ವತಿ ಮಕ್ಕಳ ಬಳಗದ ಶಿಕ್ಷಣ ಸಂಸ್ಥೆಯ ನೂತನ ಕಟ್ಟಡದ ಪೂಜಾ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಮಕ್ಕಳಲ್ಲಿನ ಬುದ್ಧಿಶಕ್ತಿ ವಿಕಸನಗೊಳಿಸಿ ಸಮಾಜದ ಜವಾಬ್ದಾರಿಯುತ ವ್ಯಕ್ತಿಯನ್ನಾಗಿಸುವುದು ಶಿಕ್ಷಣದ ಮೂಲ ಆಶಯವಾಗಿದೆ. ಶಿಕ್ಷಣ ಸೇವೆಯನ್ನೇ ಧ್ಯೇಯವಾಗಿಸಿಕೊಂಡ ತಾಯಂದಿರು ತಮ್ಮ ಶ್ರೇಷ್ಠ ಚಿಂತನೆಗಳಿಂದ ಶ್ರೀ ತಾಯಿ ಪಾರ್ವತಿ ಮಕ್ಕಳ ಬಳಗ ಪ್ರಾರಂಭಿಸಿ 75 ವರ್ಷಗಳಿಂದ ಲಕ್ಷಾಂತರ ಮಕ್ಕಳ ಬಾಳಿಗೆ ಬೆಳಕಾಗಿ ಅವರನ್ನು ಸುಸಂಸ್ಕೃತ ನಾಗರಿಕರನ್ನಾಗಿಸುತ್ತಿರುವ ಶಿಕ್ಷಣ ಸಂಸ್ಥೆಯ ಕಾರ್ಯ ಶ್ಲಾಘನೀಯ. ತೊಟ್ಟಿಲು ತೂಗುವ ಕೈ ಜಗತ್ತನ್ನೇ ಆಳಬಲ್ಲದು ಎಂಬುದನ್ನು ಈ ಸಂಸ್ಥೆ ಸಾಬೀತುಪಡಿಸಿದ್ದು, ಸೇವಾ ಕಾರ್ಯದಿಂದ ಸಂಸ್ಥೆ ಉತ್ತರೋತ್ತರವಾಗಿ ಪ್ರಗತಿ ಹೊಂದಲೆಂದು ಆಶೀರ್ವದಿಸಿದರು.

ಮುಕ್ತಿಮಂದಿರ ಧರ್ಮ ಕ್ಷೇತ್ರದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಶುಭಾಶೀರ್ವಾದ ನೀಡಿ, ನಡೆದಾಡಿದ ದೇವರು ಲಿಂ. ವೀರಗಂಗಾಧರ ಜಗದ್ಗುರುಗಳ ಅಭಯಾಶೀರ್ವಾದದಿಂದ ಗುರು-ಹಿರಿಯರ ಆಶೀರ್ವಾದ, ಸಹಕಾರದಿಂದ 1946ರಲ್ಲಿ ಮಹಿಳೆಯರೇ ಕಟ್ಟಿ ಬೆಳೆಸಿದ ತಾಯಿ ಪಾರ್ವತಿ ಮಕ್ಕಳ ಬಳಗ ಇಂದು ಹೆಮ್ಮರವಾಗಿ ಬೆಳೆದಿದೆ. ಈ ಸೇವಾ ಕಾರ್ಯ ವಿಸ್ತಾರಗೊಳ್ಳಲಿ ಎಂದರು.

ಈ ವೇಳೆ ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ಜಿ.ಎಂ ಮಹಾಂತಶೆಟ್ಟರ, ಸಂಸ್ಥೆಯ ಅಧ್ಯಕ್ಷರಾದ ಜಯಲಕ್ಷ್ಮೀ ಮಹಾಂತಶೆಟ್ಟರ ಮಾತನಾಡಿದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ಕಾರ್ಯದರ್ಶಿ ಜಯಲಕ್ಷ್ಮೀ ಗಡ್ಡದೇವರಮಠ, ಮುಖ್ಯೋಪಾಧ್ಯಾಯರಾದ ಜೆ.ಡಿ. ಲಮಾಣಿ, ಪಿಯು ಕಾಲೇಜಿನ ಪ್ರಾಚಾರ್ಯೆ ಸರಸ್ವತಿ ಹುಲ್ಲಣ್ಣವರ, ಪ್ರಭುಗೌಡ ಯಕ್ಕಿಕೊಪ್ಪ, ಸ್ವಾತಿ ಪೈ, ಜ್ಯೋತಿ ಅರಳಿಕಟ್ಟಿ ಹಾಗೂ ರೂಪಾ ನವಲೆ ಸೇರಿದಂತೆ ಹಿರಿಯರು, ಶಿಕ್ಷಕರು, ಸಿಬ್ಬಂದಿ, ಮಕ್ಕಳು ಇದ್ದರು.

## ಗ್ರಾಮೀಣ ಜಾತ್ರೆಗಳಲ್ಲಿ ಪಿನ್ ಬಾಲ್ ಜೂಜು!



■ವಿಜಯಸಾಕ್ಷಿ ಸುದ್ದಿ, ಡಂಬಳ

ಗ್ರಾಮದಲ್ಲಿ ಜರುಗಿರುವ ಜಾತ್ರಾ ಮಹೋತ್ಸವ ಸೇರಿದಂತೆ ಪ್ರತಿ ವರ್ಷ ನಡೆಯುವ ಗ್ರಾಮೀಣ ಜಾತ್ರೆಗಳು ಜನರ ಮನರಂಜನೆಗೆ ಪ್ರಮುಖ ಸ್ಥಳಗಳಾಗಿವೆ. ಇಂತಹ ಜಾತ್ರೆಗಳಲ್ಲಿ ವಿವಿಧ ಆಟಗಳು, ವ್ಯಾಪಾರ ಮಳಿಗೆಗಳು ಹಾಗೂ ಆಹಾರ ಮಳಿಗೆಗಳು ಕಾಣಸಿಗುತ್ತವೆ. ಇವುಗಳ ಜೊತೆಗೆ ಪಿನ್ ಬಾಲ್ ಆಟದಂತಹ ಕೆಲವು ಆಟಗಳು ಜೂಜಿನ ರೂಪವನ್ನು ಪಡೆದುಕೊಳ್ಳುತ್ತಿರುವುದು ಯುವಕರನ್ನು ದಾರಿ ತಪ್ಪಿಸುವ ಕೇಂದ್ರಗಳಾಗಿತ್ತಿವೆ.

ಪಿನ್ ಬಾಲ್ ಆಟದಲ್ಲಿ ಆಟಗಾರನು ನಿರ್ದಿಷ್ಟ ಮೊತ್ತದ ಹಣವನ್ನು ಪಾವತಿಸಿ ಚೆಂಡನ್ನು ಯಂತ್ರದಲ್ಲಿ ಬಿಡುತ್ತಾನೆ. ಚೆಂಡು ಬಿದ್ದ ಸ್ಥಳದ ಆಧಾರದ ಮೇಲೆ ಹಣ ನಿಗದಿಯಾಗುತ್ತದೆ. ಆಟವು ಕೇವಲ ಮನರಂಜನೆಯ ಮಟ್ಟವನ್ನು ಮೀರಿ ಜೂಜಿನ ಸ್ವರೂಪ ಪಡೆಯುತ್ತದೆ.

ಜಾತ್ರೆಯಲ್ಲಿ ನಡೆಯುವ ಪಿನ್ ಬಾಲ್ ಗ್ಯಾಂಬ್ಲಿಂಗ್ ಹಲವು ಸಮಸ್ಯೆಗಳಿಗೆ ಕಾರಣವಾಗುತ್ತದೆ. ಮಕ್ಕಳು ಮತ್ತು ಯುವಕರು ಸುಲಭವಾಗಿ ಆಕರ್ಷಿತರಾಗುತ್ತಾರೆ. ಹಣದ ನಷ್ಟ ಮತ್ತು ವ್ಯಸನಕ್ಕೆ ದಾರಿ ಮಾಡಿಕೊಡುತ್ತದೆ.

ಅಕ್ರಮ ಜೂಜಿನ ಚಟ ಬೆಳೆಸುವ ಸಾಧ್ಯತೆ ಇರುತ್ತದೆ. ಅಷ್ಟೇ ಅಲ್ಲದೆ ಕಾನೂನು ಮತ್ತು ಸಾಮಾಜಿಕ ಮೌಲ್ಯಗಳಿಗೆ ಧಕ್ಕೆ ಉಂಟಾಮಾಡುತ್ತದೆ.

ಸಾರ್ವಜನಿಕ ಸ್ಥಳಗಳಲ್ಲಿ ಅಕ್ರಮ ಜೂಜು ನಡೆಸುವುದು ಅಪರಾಧವಾಗಿದ್ದು, ಸ್ಥಳೀಯ ಆಡಳಿತ ಮತ್ತು ಪೊಲೀಸ್ ಇಲಾಖೆ ಇಂತಹ ಚಟುವಟಿಕೆಗಳ ಮೇಲೆ ನಿಗಾ ವಹಿಸಿ ಸೂಕ್ತ ಕ್ರಮಕ್ಕೆ ಮುಂದಾಗಬೇಕು ಎನ್ನುತ್ತಾರೆ ಗ್ರಾಮಸ್ಥರು.

ಜಾತ್ರೆಗಳು ಆರೋಗ್ಯಕರ ಮನರಂಜನೆಯ ಕೇಂದ್ರಗಳಾಗಿರಬೇಕು. ಪಿನ್ ಬಾಲ್ ಆಟವನ್ನು ಗ್ಯಾಂಬ್ಲಿಂಗ್ ರೂಪದಲ್ಲಿ ನಡೆಸುವುದು ಸಮಾಜಕ್ಕೆ ಹಾನಿಕಾರಕವಾಗಿದೆ.

ಆದ್ದರಿಂದ ಸಂಬಂಧಿತ ಅಧಿಕಾರಿಗಳು ಇಂತಹ ಆಟಗಳ ಮೇಲೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಸಾಮಾಜಿಕ ಹೋರಾಟಗಾರ ಮಂಜಯ್ಯಸ್ವಾಮಿ ಅರವಟಗಿಮಠ ಆಗ್ರಹಿಸಿದ್ದಾರೆ.

### ಅಂಚೆ ಕಚೇರಿಗಳಲ್ಲಿ ಸ್ಪೀಡ್ ಪೋಸ್ಟ್, ಪಾರ್ಸೆಲ್‌ಗಳ ಬುಕಿಂಗ್ ಅವಧಿ ವಿಸ್ತರಣೆ

# ಗ್ರಾಹಕರ ಅನುಕೂಲಕ್ಕಾಗಿ ಹಲವು ಸೇವೆ

■ವಿಜಯಸಾಕ್ಷಿ ಸುದ್ದಿ, ಗದಗ

ಅಂಚೆ ಇಲಾಖೆ ಗ್ರಾಹಕರಿಗೆ ಅನುಕೂಲ ಕಲ್ಪಿಸುವ ಸಲುವಾಗಿ ಸ್ಪೀಡ್ ಪೋಸ್ಟ್ ಮತ್ತು ಇತರ ಪತ್ರ ಹಾಗೂ ಪಾರ್ಸೆಲ್‌ಗಳ ಬುಕಿಂಗ್ ಅವಧಿ ವಿಸ್ತರಣೆ ಮಾಡಲಾಗಿದೆ ಎಂದು ಗದಗ ವಿಭಾಗೀಯ ಅಂಚೆ ಅಧೀಕ್ಷಕರಾದ ಎಸ್.ಎಸ್. ಶಿರಹಟ್ಟಿ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

ಭಾರತೀಯ ಅಂಚೆ ಇಲಾಖೆಯ ವತಿಯಿಂದ ಎಲ್ಲಾ ಅಂಚೆ ಕಚೇರಿಗಳಲ್ಲಿ ಕಚೇರಿ ಕಾರ್ಯ ಸಮಯ ಮುಕ್ತಾಯವಾಗುವ ಮೊದಲು ಕೊನೆಯ 30 ನಿಮಿಷಗಳವರೆಗೆ ಅಂಚೆ ವಸ್ತುಗಳನ್ನು ಬುಕ್ ಮಾಡುವ ಸೌಲಭ್ಯವನ್ನು ಒದಗಿಸಲಾಗುತ್ತಿದೆ. ಈ ವ್ಯವಸ್ಥೆಯಡಿ, ಕಾರ್ಯ ದಿನಗಳಲ್ಲಿ ಅಂಚೆ ಕಚೇರಿಗಳ ನಿಗದಿತ ಕಾರ್ಯಾವಧಿ ಮುಕ್ತಾಯಕ್ಕೆ ಮುಂಚಿತವಾಗಿ 30 ನಿಮಿಷಗಳವರೆಗೆ ಸ್ಪೀಡ್ ಪೋಸ್ಟ್, ಪಾರ್ಸೆಲ್ ಹಾಗೂ ಅಂತಾರಾಷ್ಟ್ರೀಯ ಸ್ಪೀಡ್ ಪೋಸ್ಟ್ /ಪಾರ್ಸೆಲ್‌ಗಳನ್ನು ಬುಕ್ ಮಾಡಬಹುದಾಗಿದೆ. ಇದರಿಂದ ಕಚೇರಿ ಸಮಯದ ಅಂತ್ಯದಲ್ಲಿ ಅಂಚೆ ಕಚೇರಿಗೆ ಬರುವ ಗ್ರಾಹಕರಿಗೂ ತಮ್ಮ ಅಂಚೆ ವಸ್ತುಗಳನ್ನು ಸುಲಭವಾಗಿ ಬುಕ್ ಮಾಡುವ ಅವಕಾಶ ದೊರೆಯುತ್ತದೆ.




ಮನೆಯಲ್ಲಿಯೇ ಕುಳಿತು ಪತ್ರ / ಪಾರ್ಸೆಲ್‌ಗಳ ಬುಕಿಂಗ್ ಸೌಲಭ್ಯ(Customer Self Service Portal ಇದಲ್ಲದೆ, ಸಾರ್ವಜನಿಕರ ಸೌಕರ್ಯಕ್ಕಾಗಿ ಭಾರತೀಯ ಅಂಚೆ ಇಲಾಖೆಯ ಗ್ರಾಹಕ ಸ್ವಯಂ ಸೇವಾ ಪೋರ್ಟಲ್ (Customer Self Service Portal: https://app.indiapost.gov.in/customer-selfservice/login) ಲಭ್ಯವಿದ್ದು, ಇದರ ಮೂಲಕ ಅಂಚೆ ವಸ್ತುಗಳ ಬುಕ್ಕಿಂಗ್, ಟ್ರ್ಯಾಕಿಂಗ್, ದೂರು ಸಲ್ಲಿಕೆ, ಸೇವೆಗಳ ವಿವರಗಳು ಹಾಗೂ ಇತರೆ ಅನೇಕ ಸೇವೆಗಳನ್ನು ಆನ್‌ಲೈನ್‌ನಲ್ಲೇ ಪಡೆಯಬಹುದು. ಸಾರ್ವಜನಿಕರು ಈ ಡಿಜಿಟಲ್ ಸೌಲಭ್ಯವನ್ನು ಸದುಪಯೋಗಪಡಿಸಿಕೊಳ್ಳುವಂತೆ ವಿನಂತಿಸಲಾಗಿದೆ.

ಸಾರ್ವಜನಿಕರು ಈ ಆಪ್ ಅನ್ನು ಡೌನ್ಲೋಡ್ ಮಾಡಿಕೊಂಡು ಬಳಸಬಹುದಾಗಿದ್ದು, ಡೌನ್ಲೋಡ್ ಮಾಡಲು ಅಗತ್ಯವಾದ ಕಿಖ ಕೋಡ್ India Post ಇಲಾಖೆಯ ವೆಬ್‌ಸೈಟ್‌ನಲ್ಲಿ ಲಭ್ಯವಿರುತ್ತದೆ.

ಸಾರ್ವಜನಿಕರು ಹೆಚ್ಚಿನ ಮಾಹಿತಿಗಾಗಿ ತಮ್ಮ ಸಮೀಪದ ಇಲಾಖಾ ಅಂಚೆಕಚೇರಿಯನ್ನು ಸಂಪರ್ಕಿಸುವಂತೆ ಗದಗ ವಿಭಾಗೀಯ ಅಂಚೆ ಅಧೀಕ್ಷಕರಾದ ಎಸ್.ಎಸ್. ಶಿರಹಟ್ಟಿ ಪ್ರಕಟಣೆ ಮೂಲಕ ತಿಳಿಸಿದ್ದಾರೆ.

> ಡಾಕ್ ಸೇವಾ ಆಪ್ (DAK SEVA App)ಗ್ರಾಹಕರಿಗೆ ಅಂಚೆ ಸೇವೆಗಳನ್ನು ಇನ್ನಷ್ಟು ಸುಲಭವಾಗಿ ಪಡೆಯುವ ಉದ್ದೇಶದಿಂದ ಭಾರತೀಯ ಅಂಚೆ ಇಲಾಖೆ Dak Seva App ಅನ್ನು ಬಿಡುಗಡೆ ಮಾಡಿದೆ. ಈ ಮೊಬೈಲ್ ಆಪ್ ಮೂಲಕ ಅಂಚೆ ವಸ್ತುಗಳ ಬುಕ್ಕಿಂಗ್, ಟ್ರ್ಯಾಕಿಂಗ್, ದೂರು ನೋಂದಣಿ, ಸೇವಾ ಮಾಹಿತಿ ಸೇರಿದಂತೆ ವಿವಿಧ ಗ್ರಾಹಕ ಸೇವೆಗಳು ಮೊಬೈಲ್‌ನಲ್ಲೇ ಲಭ್ಯವಿರುತ್ತವೆ.

## ಕ.ರ.ವೇ ತಾಲೂಕು ಘಟಕದ ಅಧ್ಯಕ್ಷರಾಗಿ ಶಿವು ಮಾರ್ತಂಡಪ್ಪ ಕರಡಿ ನೇಮಕ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಕ್ಷಣಾ ವೇದಿಕೆ (ರಿ) ಪ್ರವೀಣಶೆಟ್ಟಿ ಬಣ ಗದಗ ಜಿಲ್ಲೆಯ ಲಕ್ಷ್ಮೇಶ್ವರ ತಾಲೂಕು ಘಟಕದ ಅಧ್ಯಕ್ಷರನ್ನಾಗಿ ಲಕ್ಷ್ಮೇಶ್ವರದ ಶಿವು ಮಾರ್ತಂಡಪ್ಪ ಕರಡಿ ಇವರನ್ನು ರಾಜ್ಯಾಧ್ಯಕ್ಷರಾದ ಪ್ರವೀಣಶೆಟ್ಟಿ ಮತ್ತು ರಾಜ್ಯ ಸಮಿತಿಯ ಸದಸ್ಯರಾದ ದಾವಲಸಾಬ ಆರ್.ಮುಳಗುಂದ ಇವರ ಆದೇಶದ ಮೇರೆಗೆ ಗದಗ ಜಿಲ್ಲಾ ಘಟಕದ ಅಧ್ಯಕ್ಷ ವೆಂಕಟೇಶ ಆರ್.ಬೇಲೂರ ನೇಮಕ ಮಾಡಿ ಆದೇಶ ಪತ್ರ ನೀಡಿದ್ದಾರೆ.



ಸದರಿಯವರು ಕನ್ನಡ ನಾಡು, ನುಡಿ, ನೆಲ, ಜಲ, ಸಂಸ್ಕೃತಿಯ ಪರಂಪರೆಯ ಉಳಿವಿಗಾಗಿ ಹೋರಾಡುವ, ವೇದಿಕೆಯ ನೀತಿ-ನಿಯಮಗಳಿಗೆ ಕಟಿಬದ್ಧರಾಗಿ ಲಕ್ಷ್ಮೇಶ್ವರ ತಾಲೂಕಿನಲ್ಲಿ ಸಂಘಟನೆಯನ್ನು ಬಲಪಡಿಸಿಬೇಕೆಂದು ಸೂಚಿಸಿದ್ದಾರೆ.

## ಆರ್‌ಎಎಫ್ ಬೆಟಾಲಿಯನ್ ಪಥಸಂಚಲನ



■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಭದ್ರಾವತಿಯ ಆರ್‌ಎಎಫ್ ಬೆಟಾಲಿಯನ್-97 ತಂಡವು ಬುಧವಾರ ಶಿರಹಟ್ಟಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಕಾನೂನು-ಸುವ್ಯವಸ್ಥೆ ಮತ್ತು ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಮುಂಜಾಗ್ರತಾ ಕ್ರಮವಾಗಿ ಸಾರ್ವಜನಿಕರಲ್ಲಿ ಜಾಗೃತಿಯನ್ನು ಮೂಡಿಸುವುದಕ್ಕಾಗಿ ಪಥ ಸಂಚಲನ ನಡೆಸಿತು.

ಈ ಸಂದರ್ಭದಲ್ಲಿ ತಹಸೀಲ್ದಾರ ಕೆ. ರಾಘವೇಂದ್ರ ರಾವು, ಸಿಪಿಐ ಬಿ.ವಿ. ನ್ಯಾಮಗೌಡ, ಆರ್‌ಎಎಫ್ ಅಸಿಸ್ಟಂಟ್ ಕಮಾಂಡೆಂಟ್ ಅನಿಲಕುಮಾರ ಜಾಧವ, ರವೀಂದ್ರ ಮತ್ತು ಸ್ಥಳೀಯ ಪೊಲೀಸ್ ಸಿಬ್ಬಂದಿ ಉಪಸ್ಥಿತರಿದ್ದರು.


## ದೀಪದ ಬೆಳಕಿನಂತೆ ಭಾವನೆಗಳು ಪರಿಶುದ್ಧವಾಗಿರಲಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ದೇಗುಲಗಳು ಶಾಶ್ವತವಾದ ನಂದಾದೀಪವಿದ್ದಂತೆ. ಇಲ್ಲಿ ದೀಪ-ದೀಪದಿಂದ ಬೆಳಗಿಸುವ ಜೊತೆಗೆ ಮನಸ್ಸಿನಿಂದ ಮನಸ್ಸನ್ನು ಬೆಳಗುವ ಧರ್ಮ, ಆಧ್ಯಾತ್ಮ ಮತ್ತು ಜ್ಞಾನದ ದೀಪ ಬೆಳಗಿಸಿಕೊಳ್ಳಬೇಕು ಎಂದು ಹೂವಿನಶಿಗ್ಲಿ ಮಠದ ಶ್ರೀ ಚನ್ನವೀರ ಮಹಾಸ್ವಾಮಿಗಳು ಹೇಳಿದರು.

ಅವರು ಮಂಗಳವಾರ ಪಟ್ಟಣದ ಕದರಗೇರಿ ಓಣಿಯ ಶ್ರೀ ಶಿವರುದ್ರಮ್ಮ ದೇವಿ ದೇವಸ್ಥಾನದ ದೀಪೋತ್ಸವ ನೆರವೇರಿಸಿ ಪ್ರವಚನ ನೀಡಿದರು.

ದೀಪ ಮನುಷ್ಯನಲ್ಲಿನ ಅಜ್ಞಾನ, ಅಂಧಕಾರ, ಅರಿಷಡ್ವರ್ಗಗಳನ್ನು ಕಳೆದು ಸುಜ್ಞಾನ, ಸನ್ಮಾರ್ಗ, ಸಂಸ್ಕಾರ ಪ್ರಾಪ್ತಗೊಳಿಸುತ್ತದೆ. ದೀಪದ ಬೆಳಕಿನಂತೆ ಮನುಷ್ಯನ ಭಾವನೆಗಳು ಪರಿಶುದ್ಧವಾಗಿರಲಿ. ದೀಪ ಎಲ್ಲರನ್ನೂ ಒಗ್ಗೂಡಿಸುವ, ಬಾಂಧವ್ಯ ಬೆಸೆಯುವ ಚೈತನ್ಯಶಕ್ತಿ ಹೊಂದಿದೆ. ದೇವಸ್ಥಾನಗಳು ನಮ್ಮ ಸಂಸ್ಕಾರ-ಸಂಪ್ರದಾಯಯ ಪ್ರತೀಕವಾಗಿದ್ದು, ಮನುಷ್ಯರ ಬದುಕಿಗೆ ಆಚಾರ-ವಿಚಾರ ಸಂಸ್ಕಾರ, ಸನ್ಮಾರ್ಗದ ದಾರಿ ತೋರುತ್ತವೆ. ಹಿರಿಯರು ತೋರಿದ ಸತ್ಪರಂಪರೆ, ಆಚರಣೆಗಳನ್ನು ಪಾಲಿಸುವ ಜವಾಬ್ದಾರಿ ನಮ್ಮೆಲ್ಲರದ್ದಾಗಿದೆ. ಮಕ್ಕಳು ನಮ್ಮೆಲ್ಲರ ಸಂಪತ್ತಾಗಿದ್ದು, ಈ ನಿಟ್ಟಿನಲ್ಲಿ ತಾಯಂದಿರು ಮಕ್ಕಳಿಗೆ ಬಾಲ್ಯದಲ್ಲಿಯೇ ದೇವರು, ಧರ್ಮ, ತಂದೆ-ತಾಯಿ, ಗುರು-ಹಿರಿಯರ ಬಗ್ಗೆ ಪೂಜ್ಯನೀಯ ಭಾವನೆ, ಸಂಸ್ಕಾರ, ಮಾನವೀಯ ಗುಣಗಳನ್ನು ಮೂಡಿಸಬೇಕು. ನೂರಾರು ವರ್ಷಗಳ ಧಾರ್ಮಿಕ ಇತಿಹಾಸ ಹೊಂದಿರುವ ಶಿವರುದ್ರಮ್ಮ ದೇವಸ್ಥಾನವು ಈ ಭಾಗದ ಜನರ ಶೃದ್ಧಾ ಭಕ್ತಿಯ ಕೇಂದ್ರವಾಗಿದೆ.



ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ಬಸಣ್ಣ ಬೆಂಡಿಗೇರಿ, ಪೂರ್ಣಾಜಿ ಖರಾಟೆ, ಎಂ.ಕೆ. ಕಳ್ಳಿಮಠ, ಈರಣ್ಣ ಅಂಕಲಕೋಟಿ, ದೇವಪ್ಪ ಮಲ್ಲೂರ, ವೈ.ಕೆ. ಲಿಂಗಶೆಟ್ಟಿ, ಮಲ್ಲಿಕಾರ್ಜುನ ಬಣಕಾರ, ನೀಲಕಂಠಪ್ಪ ಓದುನವರ, ಶಿವಯೋಗೆಪ್ಪ ಚಂದರಗಿ, ಕಾಶಪ್ಪ ಲಿಂಗಶೆಟ್ಟಿ, ಗಂಗಪ್ಪ ಗಿಡಿಬಿಡಿ, ನೀಲಪ್ಪ ಹತ್ತಿ, ಈರಪ್ಪ ಹಾದಿಮನಿ, ನಿಂಗನಗೌಡ ಪಾಟೀಲ, ಪುಲಕೇಶಿ ಬಟ್ಟೂರ, ಯಲ್ಲಪ್ಪ ಅಡರಕಟ್ಟಿ, ಗಂಗಾಧರ ಶಿರಗಣ್ಣವರ, ಶಿವಾನಂದ ಲಿಂಗಶೆಟ್ಟಿ ಸೇರಿ ಓಣಿಯ ಗುರು-ಹಿರಿಯರು, ಮಹಿಳೆಯರು ಇದ್ದರು. ಸೋಮಣ್ಣ ಉಪನಾಳ ನಿರೂಪಿಸಿದರು. ಬಳಿಕ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ, ಪ್ರಸಾದ ಸೇವೆ ನೆರವೇರಿತು.


**ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ**

ಪಿನ್ ಕೋಡ್ ನಂ. 582101. ದೂರವಾಣಿ: 08372-278003.

ಇ-ಮೇಲ್: uda_gadag@hotmail.com

ಸಂ: ನಅಪ್ರಾಗಬೆ/ಭೂಬ/2025-26/1348 ದಿನಾಂಕ: 04.02.2026

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ **ಶ್ರೀ ಸಾಗರ ಡೊಂಗರಸಾ ಪವಾರ, ಶ್ರೀ ಫಕೀರಸಾ ತಂದೆ ಬಾಬಾಸಾ ಭಾಂಡಗೆ ಹಾಗೂ ಇತರರು** ಸಾ॥ ಗದಗ ಈ ಕೆಳಕಂಡ ಜಮೀನನ್ನು ಭೂ ಉಪಯೋಗ ಬದಲಾವಣೆ ಮಾಡಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ಬದಲಾವಣೆಯಿಂದ ಸ್ಥಳದಲ್ಲಿ ವಸತಿ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ಹಾಗೂ ಸಾರ್ವಜನಿಕರಿಗೆ ವಸತಿ ನಿವೇಶನಗಳು ಸಿಗುತ್ತವೆ. ಇದರಿಂದ ನಗರದಲ್ಲಿ ವಸತಿ ಸಮಸ್ಯೆ ಸ್ವಲ್ಪ ಬಗೆ ಹರಿಯುತ್ತದೆ ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ **ಯೋಜನಾ ಕಾಯ್ದೆ 1961 ರ ಕಲಂ 14(ಎ)ರಂತೆ** ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ **15 (ಹದಿನೈದು)** ದಿನಗಳೊಳಗಾಗಿ ಆಯುಕ್ತರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಪಿ.ಬಿ. ರೋಡ ಗದಗ-582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ.ನ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
|---|---|---|---|---|---|
| 01 | ಕಳಸಾಪೂರ | 259/*/3 | 04ಎಕರೆ-02ಗುಂಟೆ | ಕೃಷಿ ವಲಯ | ವಸತಿ |
| | | 259/*/4 | 02ಎಕರೆ-00ಗುಂಟೆ | | |
| | | 259/*/5 | 00ಎಕರೆ-33ಗುಂಟೆ | | |
| | | 260/*/3 | 01ಎಕರೆ-06ಗುಂಟೆ | | |
| | | ಒಟ್ಟು ಕ್ಷೇತ್ರ | 08ಎಕರೆ-01ಗುಂಟೆ | | |

ಸಹಿ/- ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ, ಗದಗ-ಬೆಟಗೇರಿ

ವಾ.ಸಾ.ಇ/ಗದಗ/614/ದೇಶಪಾಂಡೆಪಬ್ಲಿಸಿಟಿ/2025-26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka